RNI: KNKAN/ 25/A5387 | ಸಂಪಾದಕರು: ರಾಜೇಶ್ವರಿ ಎಸ್. ಓಲೇಕಾರ | ಸಿಇಒ: ಚಂದ್ರಶೇಖರ ಎಸ್.ಕೆ. | ಸಹ ಸಂಪಾದಕರು: ಶಿವಕುಮಾರ

# ಸಮಾಲೋಚನೆ ಸುದ್ದಿ

ಕನ್ನಡ ದಿನ ಪತ್ರಿಕೆ

ನೇರ ನಿಖರ ನಿರ್ದಿಷ್ಟ

ಮೊ.ನಂ: 8095203132 PMG/KA/NK/HVR-59/2026-28 SAMALOCHANE RANEBENNURSUDDI Kannada Daily Morning

ಸೀಜನ್ ಆರಂಭಕ್ಕೂ ಮುನ್ನವೇ ಮೆಣಸಿನಕಾಯಿಗೆ ಭರ್ಜರಿ ದರ! » 2

ಹಾವೇರಿ ಜಿಲ್ಲಾಡಳಿತಕ್ಕೆ ಹೈಕೋರ್ಟ್ ಶಾಕ್! » 3

ನದಿ ನೀರು ತುಂಬಿಸಲು ಸರ್ವರೂ ಸಹಕರಿಸಿ: ಶಾಸಕ ಬಿ.ಪಿ. ಹರೀಶ್ » 4

ಸಂಪುಟ (Volume): 1 ಸಂಚಿಕೆ (Issue): 190 ಪುಟ (Page): 4 ದರ Rs. 2 ಶುಕ್ರವಾರ 2 ಅಕ್ಟೋಬರ್ 2026 ● 2 OCTOBER 2026 ಹಾವೇರಿ ಧಾರವಾಡ ಗದಗ ಕೊಪ್ಪಳ ವಿಜಯನಗರ ಬೆಳಗಾವಿ ಉತ್ತರ ಕನ್ನಡ samalochanersuddi@gmail.com

# ಫ್ಲೈದುಬೈ ವಿಮಾನ ಹೈಜಾಕ್ ತಡೆದ ಭಾರತೀಯ ಪೈಲೆಟ್

## 180 ಪ್ರಯಾಣಿಕರ ಜೀವ ಕಾಪಾಡಿದ ಸ್ಮಿತ್ ಮಚ್ಚಾರ್

ದುಬೈ : ಫ್ಲೈದುಬೈ ವಿಮಾನ ಹೈಜಾಕ್ ತಡೆದ ಭಾರತೀಯ ಪೈಲಟ್ ಕ್ಯಾಪ್ಟನ್ ಸ್ಮಿತ್ ಮಚ್ಚಾರ್ ಹೆಸರು ಇದೀಗ ಎಲ್ಲೆಡೆ ಚರ್ಚೆಯಲ್ಲಿದೆ. ಆಕಾಶದಲ್ಲಿ 34,000 ಅಡಿ ಎತ್ತರದಲ್ಲಿ ಸಾಗುತ್ತಿದ್ದ ವಿಮಾನದಲ್ಲಿದ್ದ ನೂರಾರು ಪ್ರಯಾಣಿಕರ ಪಾಲಿಗೆ ಈ ವ್ಯಕ್ತಿ ಹೀರೋ ಆಗಿದ್ದಾರೆ. ಅಷ್ಟೇ ಅಲ್ಲದೆ, ಭಾರತದ ಪ್ರಧಾನಿ ನರೇಂದ್ರ ಮೋದಿ ಹಾಗೂ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಕೂಡಾ ಕ್ಯಾಪ್ಟನ್ ಸ್ಮಿತ್ ಕಾರ್ಯವೈಖರಿಯನ್ನು ಶ್ಲಾಘಿಸಿದ್ದಾರೆ.

**ಏನಿದು ಘಟನೆ?**

ದುಬೈಯಿಂದ ಇಸ್ರೇಲ್‌ನ ಟೆಲ್ ಅವೀವ್‌ಗೆ ಹೊರಟಿದ್ದ ಫ್ಲೈದುಬೈ FZ1073 ವಿಮಾನದಲ್ಲಿ ಭೀಕರ ಘಟನೆಯೊಂದು ನಡೆದಿತ್ತು. ಒಮಾನ್ ಮೂಲದ ಸಹ-ಪೈಲಟ್ ಇದ್ದಕ್ಕಿದ್ದಂತೆ ಮುಖ್ಯ ಪೈಲಟ್ ಸ್ಮಿತ್ ಮಚ್ಚಾರ್ ಅವರ ಮೇಲೆ ಚಾಕುವಿನಿಂದ ದಾಳಿ ನಡೆಸಿದ್ದನು. ದಾಳಿಯಿಂದ ಗಂಭೀರವಾಗಿ ಗಾಯಗೊಂಡರೂ ಧೈರ್ಯಗುಂದದ ಕ್ಯಾಪ್ಟನ್ ಸ್ಮಿತ್, ದಾಳಿಕೋರನಿಗೆ ಸೂಕ್ತ ರೀತಿಯಲ್ಲಿ ಪ್ರತ್ಯುತ್ತರ ನೀಡಿ ವಿಮಾನದ ನಿಯಂತ್ರಣ ಕೈತಪ್ಪದಂತೆ ತಡೆದಿದ್ದಾರೆ.

**ಯಾರೀ ಕ್ಯಾಪ್ಟನ್ ಸ್ಮಿತ್ ಮಚ್ಚಾರ್?:** ಕ್ಯಾಪ್ಟನ್ ಸ್ಮಿತ್ ಮಚ್ಚಾರ್ ಭಾರತೀಯ ಮೂಲದ ಪೈಲೆಟ್. ವಾಣಿಜ್ಯ ವಿಮಾನಯಾನದಲ್ಲಿ 13ಕ್ಕೂ ಹೆಚ್ಚು ವರ್ಷಗಳ ದೀರ್ಘ ಅನುಭವ ಹೊಂದಿದ್ದಾರೆ. ಬೋಯಿಂಗ್ 737 ಮಾದರಿಯ ವಿಮಾನಗಳಲ್ಲಿ ಒಟ್ಟು 9,750 ಗಂಟೆಗಳ ಕಾಲ ಹಾರಾಟ ನಡೆಸಿರುವ ಅನುಭವ ಹೊಂದಿದ್ದಾರೆ. ಅಲ್ಲದೆ, 6,400ಕ್ಕೂ ಹೆಚ್ಚು ಗಂಟೆಗಳನ್ನು ಮುಖ್ಯ ಕಮಾಂಡರ್ ಆಗಿಯೇ ಪೂರೈಸಿದ್ದಾರೆ.

**ಸ್ಪೈಸ್‌ಜೆಟ್‌ನಲ್ಲಿ ಸೇವೆ:** ಫ್ಲೈದುಬೈ ಸಂಸ್ಥೆಗೆ ಸೇರ್ಪಡೆಯಾಗುವ ಮೊದಲು, ಅವರು ಭಾರತದ 'ಸ್ಪೈಸ್‌ಜೆಟ್' ಸಂಸ್ಥೆಯಲ್ಲಿ ಸುಮಾರು 11 ವರ್ಷಗಳ ಕಾಲ ಸೇವೆ ಸಲ್ಲಿಸಿದ್ದರು. ಅಲ್ಲಿ ಅವರು ಹಿರಿಯ ಕಮಾಂಡರ್ ಹಾಗೂ 'ಲೈನ್ ಟ್ರೈನಿಂಗ್ ಕ್ಯಾಪ್ಟನ್' ಆಗಿ ಹೊಸ ಪೈಲಟ್‌ಗಳಿಗೆ ತರಬೇತಿಯನ್ನು ನೀಡುತ್ತಿದ್ದರು. ಜೂನ್ 2022 ರಲ್ಲಿ ಕ್ಯಾಪ್ಟನ್ ಆಗಿ ಫ್ಲೈದುಬೈ ಸಂಸ್ಥೆಗೆ ಸೇರಿದ್ದರು. ಬೋಯಿಂಗ್ 737–800 ಮತ್ತು ಬೋಯಿಂಗ್ 737 MAX ವಿಮಾನಗಳನ್ನು ಚಾಲನೆ ಮಾಡುವಲ್ಲಿ ಸ್ಮಿತ್ ಅತ್ಯಂತ ನಿಪುಣರಾಗಿದ್ದಾರೆ.



### 34,000 ಅಡಿ ಎತ್ತರದಲ್ಲಿ ನಡೆದಿದ್ದೇನು?

**ಫ್ಲೈದುಬೈ ಸಂಸ್ಥೆಗೆ ಸೇರಿದ ವಿಮಾನವು ಟೆಲ್ ಅವೀವ್ ಕಡೆಗೆ ಚಲಿಸುತ್ತಿದ್ದಾಗ, ಕಾಕ್‌ಪಿಟ್ ಒಳಗೆ ಸಹ-ಪೈಲಟ್ ಕ್ಯಾಪ್ಟನ್ ಮಚ್ಚಾರ್ ಅವರಿಗೆ ಚಾಕುವಿನಿಂದ ಇರಿದಿದ್ದಾನೆ. ಪರಿಣಾಮ ಕ್ಯಾಪ್ಟನ್ ಸ್ಮಿತ್‌ಗೆ ಗಂಭೀರ ಗಾಯವಾಗಿದೆ. ಘಟನೆಯಿಂದ ವಿಮಾನವು ಕೇವಲ 37 ಸೆಕೆಂಡುಗಳಲ್ಲಿ ಬರೋಬ್ಬರಿ 14,300 ಅಡಿಗಳಷ್ಟು ಕೆಳಗೆ ಬಂದಿದೆ.**

### ಎಚ್ಚೆತ್ತುಕೊಂಡ ಸ್ಮಿತ್

**ತೀವ್ರವಾಗಿ ಗಾಯಗೊಂಡರೂ ಸ್ಮಿತ್ ಸಮಯ ಪ್ರಜ್ಞೆ ತೋರಿದ್ದಾರೆ. ತಕ್ಷಣವೇ ವಿಮಾನದಿಂದ ಅಪಹರಣ ಅಥವಾ ಹೈಜಾಕ್ ಸೂಚಿಸುವ ಅಂತರರಾಷ್ಟ್ರೀಯ ಎಮರ್ಜೆನ್ಸಿ ಕೋಡ್ ಸಿಗ್ನಲ್ ರವಾನಿಸಿದ್ದಾರೆ. ಈ ಸಿಗ್ನಲ್ ತಲುಪುತ್ತಿದ್ದಂತೆಯೇ ಇಸ್ರೇಲಿ ವಾಯುಪಡೆಯ ಯುದ್ಧ ವಿಮಾನಗಳು ತಕ್ಷಣವೇ ಗಗನಕ್ಕೆ ಹಾರಿವೆ.**

### 9/11 ಮಾದರಿ ದಾಳಿಯ ಸಂಚು?

**ಇಸ್ರೇಲಿ ಅಧಿಕಾರಿಗಳ ಪ್ರಕಾರ, ಇದು ಕೇವಲ ಸಾಮಾನ್ಯ ವಿಮಾನ ಅಪಹರಣವಾಗಿರಲಿಲ್ಲ. ಬದಲಿಗೆ ವಿಮಾನದ ನಿಯಂತ್ರಣ ಸಾಧಿಸಿ, ಅದನ್ನು ಜನನಿಬಿಡ ಪ್ರದೇಶಕ್ಕೆ ಅಪ್ಪಳಿಸಿ 9/11 ಮಾದರಿಯ ದಾಳಿ ನಡೆಸುವ ಸಂಚಾಗಿತ್ತು.ಈ ವಿಚಾರವನ್ನು ದೃಢಪಡಿಸಿರುವ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ದೃಢಪಡಿಸಿದ್ದಾರೆ.**

### ಪೈಲೆಟ್ ಸ್ಮಿತ್‌ಗೆ ಶ್ಲಾಘನೆ

**ಘಟನೆಯಲ್ಲಿ ಎದೆಗುಂದದೆ ಪ್ರಯಾಣಿಕರನ್ನು ರಕ್ಷಣೆ ಮಾಡಿದ ಪೈಲೆಟ್ ಸ್ಮಿತ್ ಅವರನ್ನು ಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಶ್ಲಾಘಿಸಿದ್ದಾರೆ. ರಕ್ತಸಿಕ್ತ ಸ್ಥಿತಿಯಲ್ಲೂ ಹೋರಾಡಿ ದುರಂತ ತಪ್ಪಿಸಿದ ಪೈಲಟ್ ಹಾಗೂ ಸಿಬ್ಬಂದಿಯ ಸಾಹಸವನ್ನು ಕೊಂಡಾಡಿದ್ದಾರೆ. ಕ್ಯಾಪ್ಟನ್ ಸ್ಮಿತ್ ಮಚ್ಚಾರ್ ಅವರ ಸಮಯಪ್ರಜ್ಞೆ, ಧೈರ್ಯ ಹಾಗೂ ವರ್ಷಗಳ ಕಾಲದ ವಿಮಾನ ಹಾರಾಟದ ಅನುಭವವೇ 180ಕ್ಕೂ ಹೆಚ್ಚು ಪ್ರಯಾಣಿಕರ ಜೀವ ಉಳಿಯಲು ಪ್ರಮುಖ ಕಾರಣವಾಗಿದೆ ಎಂಬ ಮೆಚ್ಚುಗೆಯ ಸುರಿಮಳೆ ಇದೀಗ ಎಲ್ಲೆಡೆ ವ್ಯಕ್ತವಾಗುತ್ತಿದೆ.**

# ಮಾಲತೇಶ ಸ್ವಾಮಿ ದೇವಸ್ಥಾನ ಕಚೇರಿಗೆ ಸಿಬ್ಬಂದಿಯಿಂದಲೇ ಬೀಗ

**ಸಮಾಲೋಚನೆ ಸುದ್ದಿ ರಾಣೇಬೆನ್ನೂರು**

ದೇವರಗುಡ್ಡದ ಶ್ರೀ ಮಾಲತೇಶ ಸ್ವಾಮಿ ದೇವಸ್ಥಾನದಲ್ಲಿ ಕೆಲಸ ಮಾಡುವ ಸಿಬ್ಬಂದಿಗಳಿಗೆ ವೇತನದಲ್ಲಿ ತಾರತಮ್ಯ ಮಾಡಲಾಗಿದೆ ಎಂದು ಆರೋಪಿಸಿ ಸಿಬ್ಬಂದಿಗಳು ಆಡಳಿತ ಕಚೇರಿಗೆ ಬೀಗ ಹಾಕಿ ಪ್ರತಿಭಟನೆ ನಡೆಸಿದ ಘಟನೆ ಗುರುವಾರ ದೇವರಗುಡ್ಡ ಗ್ರಾಮದಲ್ಲಿ ನಡೆದಿದೆ.



ದೇವರಗುಡ್ಡದ ಮಾಲತೇಶ ಸ್ವಾಮಿ ಸನ್ನಿಧಿಯಲ್ಲಿ ಕೆಲಸ ಮಾಡುತ್ತಿರುವ ಕೆಲ ಸಿಬ್ಬಂದಿಗಳು ಬೀಗ ಹಾಕಿ ನಮಗೆ ವೇತನ ತಾರತಮ್ಯ ಮಾಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿ ಆಡಳಿತ ಮಂಡಳಿಯ ವಿರುದ್ಧ ಪ್ರತಿಭಟನೆ ನಡೆಸಿದರು.

ನಂತರ ಸ್ಥಳಕ್ಕೆ ಆಗಮಿಸಿದ ದೇವಸ್ಥಾನ ಆಡಳಿತ ಮಂಡಳಿಯ ಸಮಿತಿಯ ಚೇರ್ಮನ್ ಹಾಗೂ ಸಿಬ್ಬಂದಿ ನಡುವೆ ವಾಗ್ವಾದ ನಡೆಯಿತು.

ಈ ಸಂದರ್ಭದಲ್ಲಿ ಸ್ಥಳಕ್ಕೆ ಆಗಮಿಸಿದ ಗ್ರಾಮಸ್ಥರು ಕಚೇರಿಗೆ ಬೀಗ ಹಾಕಿದ ಸಿಬ್ಬಂದಿಯನ್ನು ತರಾಟೆಗೆ ತೆಗೆದುಕೊಂಡ ಘಟನೆ ನಡೆಯಿತು. ನಂತರ ಸ್ಥಳಕ್ಕೆ ಗ್ರಾಮೀಣ ಠಾಣೆಯ ಪಿಐ ನಾಗಯ್ಯ ಕಾಡದೇವರ ಭೇಟಿ ನೀಡಿ ಸಿಬ್ಬಂದಿಯೊಂದಿಗೆ ಮಾತುಕತೆ ನಡೆಸಿ ಬಳಿಕ ಆಡಳಿತ ಕಚೇರಿಯ ಬೀಗ ತೆರವುಗೊಳಿಸಿದರು.

**ಏನಿದು ಸಮಸ್ಯೆ:** ದೇವಸ್ಥಾನದಲ್ಲಿ ಒಟ್ಟು 27 ಸಿಬ್ಬಂದಿಗಳು ಸ್ವಚ್ಛತೆ ಹಾಗೂ ಸೇವಾ ಸಿಬ್ಬಂದಿಗಳಾಗಿ ಕಾರ್ಯನಿರ್ವಹಿಸುತ್ತಿದ್ದು, ಅವರಿಗೆ ವೇತನವನ್ನು ಪ್ರತಿ ಮಾಹೆ ದೇವಸ್ಥಾನ ಆಡಳಿತ ಮಂಡಳಿಯ ವತಿಯಿಂದ ನೀಡಲಾಗುತ್ತದೆ. ಆದರೆ ಇತ್ತಿಚೆಗೆ ಹೊಸದಾಗಿ ಬಂದಿರುವ ಆಡಳಿತ ಮಂಡಳಿಯ ಸದಸ್ಯರು ಐದು ಜನ ಸಿಬ್ಬಂದಿಗಳನ್ನು ಒಂದು ವರ್ಷದ ಹಿಂದೆ ಕೆಲಸಕ್ಕೆ ತೆಗೆದುಕೊಳ್ಳಲಾಗಿದೆ. ಅವರ ಬಂದ ಎರಡು ತಿಂಗಳಲ್ಲಿ 9 ಸಾವಿರದಿಂದ 18 ಸಾವಿರಕ್ಕೆ ಹೆಚ್ಚಳ ಮಾಡಿ ವೇತನ ನೀಡುತ್ತಿದ್ದಾರೆ. ಆದರೆ ನಾವು ಇಪ್ಪತ್ತು ವರ್ಷದಿಂದ ಕೆಲಸ ಮಾಡುತ್ತಿದ್ದರು ನಮಗೆ ನಮ್ಮ ವೇತನದ ವಿಚಾರದಲ್ಲಿ ತಾರತಮ್ಯ ಮಾಡಲಾಗಿದೆ. ಈ ಹಿನ್ನೆಲೆ ಆಡಳಿತ ಮಂಡಳಿ ಕೂಡಲೇ ದೇವಸ್ಥಾನದಲ್ಲಿ ಕೆಲಸ ಮಾಡುವ ಎಲ್ಲಾ ಸಿಬ್ಬಂದಿಗೂ ನ್ಯಾಯಯುತವಾಗಿ ವೇತನ ನಿಗದಿಪಡಿಸಬೇಕು ಎಂದು ದೇವಸ್ಥಾನದ ಕ್ಲರ್ಕ್ ಬಸವರಾಜ ಚೂರಿ ಹೇಳಿದರು.

**ವೇತನ ತಾರತಮ್ಯ ಆರೋಪ**

ಸಿಬ್ಬಂದಿಯ ಆರೋಪಕ್ಕೆ ಪ್ರತಿಕ್ರಿಯಿಸಿರುವ ದೇವಸ್ಥಾನ ಸಮಿತಿ ಚೇರ್ಮನ್ ಭರಮಪ್ಪ ಊರ್ಮಿ, ವೇತನ ಹಾಗೂ ಆಡಳಿತಕ್ಕೆ ಸಂಬಂಧಿಸಿದ ನಿರ್ಧಾರಗಳನ್ನು ಸಮಿತಿಯ ನಿಯಮಾನುಸಾರ ಕೈಗೊಳ್ಳಲಾಗುತ್ತಿದೆ.

ದೇವಸ್ಥಾನದ ಆಡಳಿತವು ಸಮಿತಿಯ ಮಾರ್ಗದರ್ಶನದಲ್ಲಿ ನಡೆಯಬೇಕು. ಸಿಬ್ಬಂದಿಯ ವೇತನ ಸೇರಿದಂತೆ ಆಡಳಿತಾತ್ಮಕ ವಿಚಾರಗಳನ್ನು ಸಮಿತಿ ಪರಿಶೀಲಿಸಿ ನಿರ್ಧರಿಸುತ್ತದೆ. ಯಾವುದೇ ಸಿಬ್ಬಂದಿಗೆ ಅನ್ಯಾಯ ಮಾಡುವ ಉದ್ದೇಶ ಸಮಿತಿಗಿಲ್ಲ ಎಂದು ತಿಳಿಸಿದರು.

ದೇವಸ್ಥಾನದ ಆಡಳಿತ ವ್ಯವಸ್ಥೆಗೆ ಅಡ್ಡಿಯಾಗುವ ರೀತಿಯಲ್ಲಿ ಸಿಬ್ಬಂದಿಗಳು ನಡೆದುಕೊಂಡರೆ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಹೇಳಿದ್ದಾರೆ.

### ಸಮಸ್ಯೆ ಬಗೆಹರಿಯದಿದ್ದರೆ ಹೋರಾಟ

**ದೇವಸ್ಥಾನದ ಆಡಳಿತ ಮಂಡಳಿ ಎಲ್ಲಾ ಸಿಬ್ಬಂದಿಗಳಿಗೆ ವೇತನ ತಾರತಮ್ಯ ಮಾಡದೆ ಎಲ್ಲರಿಗೂ ಸಮನಾಗಿ ವೇತನವನ್ನು ಪ್ರತಿ ತಿಂಗಳು ನೀಡಬೇಕು. ಮತ್ತೆ ತಾರತಮ್ಯ ಮಾಡಿದರೆ ಮುಂದಿನ ದಿನಗಳಲ್ಲಿ ಮತ್ತೆ ಹೋರಾಟ ಮಾಡಲಾಗುವುದು ಎಂದು ಸಿಬ್ಬಂದಿ ತಿಳಿಸಿದರು.**

### ದಾಖಲೆ ಪುಸ್ತಕಗಳ ಕುರಿತು ಆರೋಪ–ಪ್ರತ್ಯಾರೋಪ

**ದೇವಸ್ಥಾನದ ಆಡಳಿತ ಮಂಡಳಿಗೆ ಸಂಬಂಧಿಸಿದ ಕೆಲವು ದಾಖಲಾತಿ ಪುಸ್ತಕಗಳನ್ನು ಇಬ್ಬರು ಸಿಬ್ಬಂದಿಗಳು ತೆಗೆದು–ಕೊಂಡು ಹೋಗಿದ್ದಾರೆ ಎಂಬ ಆರೋಪವನ್ನು ಆಡಳಿತ ಮಂಡಳಿ ಮಾಡಿದೆ. ಈ ಸಂಬಂಧ ಇಬ್ಬರ ವಿರುದ್ಧ ಪ್ರಕರಣ ದಾಖಲಾಗಿದೆ ಎಂದು ಚೇರ್ಮನ್ ಭರಮಪ್ಪ ಊರ್ಮಿ ತಿಳಿಸಿದ್ದಾರೆ. ಅಲ್ಲದೆ ಕೆಲ ಕಾಣದ ಕೈಗಳು ದೇವಸ್ಥಾನ ಆಡಳಿತ ಮಂಡಳಿಯ ವಿರುದ್ಧ ಷಡ್ಯಂತ್ರ ಮಾಡುತ್ತಿದ್ದಾರೆ ಎಂದು ಹೇಳಿದರು.**

# ಕೆಸ್ವಾನ್ 444 ಕೋಟಿ ರೂ. ವೆಚ್ಚದ ಟೆಂಡರ್: ಯತೀಂದ್ರ ಪ್ರಭಾವ ಬಳಕೆ, ಬಿಜೆಪಿ ಆರೋಪ

**ಬೆಂಗಳೂರು:** ರಾಜ್ಯ ಸರಕಾರದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅಧೀನದಲ್ಲಿರುವ ಕರ್ನಾಟಕ ರಾಜ್ಯ ವಿಸ್ತೃತ ಜಾಲ ಯೋಜನೆ (ಕೆಸ್ವಾನ್) ವಿಭಾಗದಲ್ಲಿ444 ಕೋಟಿ ರೂ. ಹಾಗೂ ಕರ್ನಾಟಕ ರಾಜ್ಯ ದತ್ತಾಂಶ ಕೇಂದ್ರದಲ್ಲಿ(ಕೆಎಸ್‌ಡಿಸಿ) ನೂರಾರು ಕೋಟಿ ರೂ. ಅಕ್ರಮ ನಡೆದಿದೆ ಎಂದು ಬಿಜೆಪಿಯ ಎನ್.ಆರ್.ರಮೇಶ್ ಗಂಭೀರ ಆರೋಪ ಮಾಡಿದ್ದಾರೆ.



ಈ ಕುರಿತು ಮಂಗಳವಾರ ಲೋಕಾಯುಕ್ತ, ಇ.ಡಿ, ಜನಪ್ರತಿನಿಧಿಗಳ ನ್ಯಾಯಾಲಯ ಹಾಗೂ ಮುಖ್ಯಮಂತ್ರಿಗಳಿಗೆ ದೂರು ನೀಡಿರುವ ಅವರು, "2025ರ ಜುಲೈನಲ್ಲಿ ಆಹ್ವಾನಿಸಿದ್ದ 444 ಕೋಟಿ ರೂ.ಗಳ ಕೆಸ್ವಾನ್ 3.0 ಯೋಜನೆಯ ಟೆಂಡರ್‌ನಲ್ಲಿ ಎರಡು ಸಂಸ್ಥೆಗಳು ಭಾಗವಹಿಸಿದ್ದರೂ ಇ- ಆಡಳಿತ ಕೇಂದ್ರವು ಏಕಾಏಕಿ ರದ್ದುಗೊಳಿಸಲಾಯಿತು. ಬಳಿಕ ಡಿಸೆಂಬರ್‌ನಲ್ಲಿ ಕರೆಯಲಾಗಿದ್ದ ಮರು ಟೆಂಡರ್‌ನಲ್ಲಿ ಸಿಸ್ಕೋ ಸಂಸ್ಥೆಯು ರೈಲ್‌ಟೆಲ್ ಸಂಸ್ಥೆಯ ಸಹಭಾಗಿತ್ವದಲ್ಲಿ ಗುತ್ತಿಗೆ ಪಡೆದಿದೆ.

ಆದರೆ, ಸಾಫ್ಟ್‌ವೇರ್ ತಂತ್ರಾಂಶದಲ್ಲಿ ಯಾವುದೇ ಅನುಭವವಿಲ್ಲದ ರೈಲ್‌ಟೆಲ್ ಸಂಸ್ಥೆಯು ಹೈದರಾಬಾದ್ ಮೂಲದ ಅಲ್ವಿ ಸಾಫ್ಟ್‌ವೇರ್ ಸೊಲ್ಯೂಷನ್ಸ್ ಪ್ರೈ.ಲಿ ಎಂಬ ಕಂಪನಿಯೊಂದಿಗೆ ಒಡಂಬಡಿಕೆ ಮಾಡಿಕೊಂಡಿದೆ," ಎಂದು ದೂರಿದ್ದಾರೆ.'

'ತಂತ್ರಾಂಶ ನಿರ್ವಹಣೆಯಲ್ಲಿ ಅರ್ಹತೆ ಹೊಂದಿದ್ದ ಟೆಲಿ ಕಮ್ಯುನಿಕೇಷನ್ಸ್ ಕನ್ಸಲ್ಟೆಂಟ್ಸ್ ಇಂಡಿಯಾ ಲಿಮಿಟೆಡ್ (ಟಿಸಿಐಎಲ್) ಸಂಸ್ಥೆಯು ಬಿಡ್ ಸಲ್ಲಿಸಿದ್ದರೂ, ಸಿಸ್ಕೋ ಸಂಸ್ಥೆಯು ಸಂಬಂಧಪಟ್ಟ ದಾಖಲೆಗಳನ್ನು ಟೆಂಡರ್ ಪ್ರಕ್ರಿಯೆಯ ಅಂತಿಮ ದಿನದವರೆಗೆ ನೀಡಿಲ್ಲ. ಹೀಗಾಗಿ, ಟಿಸಿಐಎಲ್ ಸಂಸ್ಥೆ ಟೆಂಡರ್ ಪ್ರಕ್ರಿಯೆಯಲ್ಲಿ ಭಾಗವಹಿಸಲು ಸಾಧ್ಯವಾಗಲಿಲ್ಲ. ಈ ಕುರಿತು ಟಿಸಿಐಎಲ್ ಸಂಸ್ಥೆಯು ಸಿಸ್ಕೋ ವಿರುದ್ಧ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಹಾಗೂ ಇ- ಆಡಳಿತ ಕೇಂದ್ರದ ಸಿಇಒಗೆ ದೂರು ನೀಡಿದರೂ ಯಾವುದೇ ಕ್ರಮ ಕೈಗೊಂಡಿಲ್ಲ,' ಎಂದು ಹೇಳಿದ್ದಾರೆ.

"ಇ-ಆಡಳಿತ ಕೇಂದ್ರದ ಸಿಇಒ ಭೂಬಾಲನ್ ಅವರು ಕೆಸ್ವಾನ್ 3.0 ಯೋಜನೆಯ 444 ಕೋಟಿ ಮೊತ್ತದ ಟೆಂಡರ್‌ನಲ್ಲಿ ಸಿಸ್ಕೋ ಸಂಸ್ಥೆ ಮಾತ್ರ ಭಾಗವಹಿಸಲು ಅನುಕೂಲವಾಗುವಂತೆ ಷರತ್ತು ಮತ್ತು ನಿಬಂಧನೆಗಳನ್ನು ವಿಧಿಸಿದ್ದರು. 2023-26ರ ಅವಧಿಯಲ್ಲಿ ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯ ಅವರೇ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಜವಾಬ್ದಾರಿ ಹೊತ್ತಿದ್ದರು. ಆಗ ಈ ಇಲಾಖೆಯ ಎಲ್ಲ ಕಾರ್ಯ ಚಟುವಟಿಕೆಗಳನ್ನು ಅನಧಿಕೃತವಾಗಿ ಡಾ. ಯತೀಂದ್ರ ಸಿದ್ದರಾಮಯ್ಯ ಅವರೇ ನಿರ್ವಹಿಸುತ್ತಿದ್ದರು," ಎಂದು ಆಪಾದಿಸಿದ್ದಾರೆ."

ಅದೇ ರೀತಿ ಕೆಎಸ್‌ಡಿಸಿ ವಿಭಾಗದಲ್ಲಿ ಸ್ಯಾನ್ ಸ್ಟೋರೇಜ್ ಖರೀದಿ ಪ್ರಕ್ರಿಯೆಯಲ್ಲೂ ಅಕ್ರಮ ನಡೆದಿದೆ. 2024ರ ಜುಲೈನಲ್ಲಿ ಪೆಟಾಬೈಟ್ ಸ್ಯಾನ್ ಸ್ಟೋರೇಜ್ ಅನ್ನು 2.48 ಕೋಟಿ ರೂ.ಗೆ ಖರೀದಿಸಲಾಗಿದೆ. ಅದೇ ತಂತ್ರಾಂಶವನ್ನು 2025ರ ಮೇ ತಿಂಗಳಲ್ಲಿ3.36 ಕೋಟಿ ರೂ.ಗೆ ಖರೀದಿ ಮಾಡಲಾಗಿದೆ. ಮತ್ತೆ 2026ರ ಜನವರಿಯಲ್ಲಿ2.92 ಕೋಟಿ ರೂ.ಗೆ ಖರೀದಿಸಲು ಐಬಿಎಂ ಸಂಸ್ಥೆಗೆ ಇನ್ಸ್‌ಪಿರಿಸಿಸ್ ಎಂಬ ಬಿಡ್ಡರ್ ಮೂಲಕ ಪತ್ರ ನೀಡಲಾಗಿದ್ದು, ಈವರೆಗೆ ತಂತ್ರಾಂಶ ಪೂರೈಕೆಯಾಗಿಲ್ಲ. ಆದರೂ, ಎರಡೂ ಸಂಸ್ಥೆಗಳನ್ನು ಕಪ್ಪುಪಟ್ಟಿಗೆ ಸೇರಿಸಿಲ್ಲ. ಠೇವಣಿಯನ್ನೂ ಮುಟ್ಟುಗೋಲು ಹಾಕಿಕೊಂಡಿಲ್ಲ. ಬದಲಿಗೆ ಅದೇ ಐಬಿಎಂಗೆ ಸೊನಾಟ ಮೂಲಕ 14.96 ಕೋಟಿ ರೂ.ಗಳ ಟೆಂಡರ್ ನೀಡಲಾಗಿದೆ," ಎಂದು ಹೇಳಿದ್ದಾರೆ.'

# ಬಸ್ ಪ್ರಯಾಣ ದರ ಏರಿಕೆ ಶೀಘ್ರ

**ಬೆಂಗಳೂರು:** ಕರ್ನಾಟಕದಲ್ಲಿ ಹಾಲಿನ ದರ ಏರಿಕೆಗೆ ಬೇಡಿಕೆ ಬೆನ್ನಲ್ಲೇ, ಬಸ್ ಪ್ರಯಾಣವೂ ದುಬಾರಿಯಾಗಲಿದೆ ಎಂಬ ಮಾತುಗಳಿಗೆ ಸ್ವತಃ ಸಾರಿಗೆ ಸಚಿವರೇ ಪುಷ್ಟಿ ನೀಡಿದ್ದಾರೆ. ಸಾರಿಗೆ ನಿಗಮಗಳ ಬಸ್ ದರ ಹೆಚ್ಚಳ ಸಂಬಂಧ ರಚಿಸಿದ ನಿವೃತ್ತ ಐಎಎಸ್ ಅಧಿಕಾರಿ ಅತುಲ್ ತಿವಾರಿ ನೇತೃತ್ವದ ಉನ್ನತ ಮಟ್ಟದ ಸಮಿತಿ ಒಂದೆರಡು ದಿನಗಳಲ್ಲಿ ವರದಿ ಸಲ್ಲಿಸಲಿದ್ದು, ಸಂಪುಟದ ಅನುಮೋದನೆ ಪಡೆದು ಶೀಘ್ರ ದರ ಪರಿಷ್ಕರಿಸಲಾಗುವುದು ಎಂದು ಸಾರಿಗೆ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿ, "ಸಾರಿಗೆ ನಿಗಮಗಳು ಆರ್ಥಿಕವಾಗಿ ತೀವ್ರ ಸಂಕಷ್ಟ ಎದುರಿಸುತ್ತಿರುವುದರಿಂದ ಪ್ರಯಾಣ ದರ ಹೆಚ್ಚಳ ಅನಿವಾರ್ಯವಾಗಿದೆ. ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಕಳೆದ ಒಂದು ವರ್ಷದಲ್ಲಿ ನಾಲ್ಕು ಬಾರಿ ಡೀಸೆಲ್ ಬೆಲೆ ಹೆಚ್ಚಳ ಮಾಡಿದೆ. ಇದರ ಪರಿಣಾಮ ಪ್ರತಿ ಲೀಟರ್ ಡೀಸೆಲ್ ಬೆಲೆ 15ರಿಂದ 16 ರೂ. ಹೆಚ್ಚಳವಾಗಿದ್ದು, ನಮ್ಮ ಸಾರಿಗೆ ನಿಗಮಗಳಿಗೆ ವಾರ್ಷಿಕ 8 ಸಾವಿರ ಕೋಟಿ ರೂ. ನಷ್ಟವಾಗುತ್ತಿದೆ," ಎಂದು ಹೇಳಿದರು.

**ಸಿಎಂ ಅನುಮೋದನೆ ಬಳಿಕ ನಿರ್ಧಾರ:** "ಅತುಲ್ ತಿವಾರಿ ಅವರು ಎಲ್ಲಾ ಸಾರಿಗೆ ನಿಗಮಗಳ ಆರ್ಥಿಕ ಪರಿಸ್ಥಿತಿ ಬಗ್ಗೆ ಅಧ್ಯಯನ ನಡೆಸಿದ್ದಾರೆ. ಆ ವರದಿಯನ್ನು ಸಚಿವ ಸಂಪುಟ ಸಭೆಯಲ್ಲಿಟ್ಟು ಚರ್ಚಿಸಿ, ಮುಖ್ಯಮಂತ್ರಿಗಳ ಅನುಮೋದನೆ ಪಡೆದ ನಂತರ ಪ್ರಯಾಣ ದರವನ್ನು ಪರಿಷ್ಕರಣೆ ಮಾಡಲಾಗುತ್ತದೆ," ಎಂದು ಸ್ಪಷ್ಟ ಪಡಿಸಿದರು.

ಶಕ್ತಿ ಕಾರ್ಡ್ ವಿತರಣೆ

"ಅನ್ಯ ರಾಜ್ಯಗಳ ಮಹಿಳೆಯರೂ ಬಸ್‌ಗಳಲ್ಲಿ ಉಚಿತ ಪ್ರಯಾಣ ಮಾಡುತ್ತಿರುವ ಬಗ್ಗೆ ವರದಿಗಳು ಬರುತ್ತಿವೆ. ಇದನ್ನು ತಪ್ಪಿಸುವ ನಿಟ್ಟಿನಲ್ಲಿ ನಮ್ಮ ರಾಜ್ಯದ ಮಹಿಳೆಯರಿಗೆ ಮಾತ್ರ ಸೀಮಿತಗೊಳಿಸಲು ಸ್ಮಾರ್ಟ್ ಕಾರ್ಡ್ ವ್ಯವಸ್ಥೆಯನ್ನು ಜಾರಿಗೆ ತರುತ್ತಿದ್ದೇವೆ. ಮೊದಲ ಹಂತದಲ್ಲಿ 1 ಕೋಟಿ ಮಹಿಳೆಯರಿಗೆ ನೀಡುವ ದಿಸೆಯಲ್ಲಿ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿದ್ದು, ಎರಡು ತಿಂಗಳಲ್ಲಿ ಸ್ಮಾರ್ಟ್ ಕಾರ್ಡ್ ಸಿದ್ಧವಾಗಲಿವೆ," ಎಂದು ಬೈರತಿ ಸುರೇಶ್ ತಿಳಿಸಿದರು.

# ಸರ್ಕಾರದ ಉರ್ದು ಹಬ್ಬಕ್ಕೆ ಬಿಜೆಪಿ, ಕನ್ನಡಪರ ಸಂಘಟನೆಗಳ ವಿರೋಧ

**ಬೆಂಗಳೂರು** : ಕರ್ನಾಟಕ ರಾಜ್ಯ ಸರ್ಕಾರದ ವತಿಯಿಂದ ಆಯೋಜಿಸಲು ಉದ್ದೇಶಿಸಲಾಗಿರುವ 'ಉರ್ದು ಹಬ್ಬದ' ಬಗ್ಗೆ ಬಿಜೆಪಿ ಈಗಾಗಲೇ ತೀವ್ರ ವಿರೋಧವನ್ನು ವ್ಯಕ್ತ ಪಡಿಸಿವೆ. ಇನ್ನು, ವಿವಿಧ ಕನ್ನಡ ಪರ ಸಂಘಟನೆಗಳೂ, ಸರ್ಕಾರದ ನಿರ್ಧಾರಕ್ಕೆ ವಿರೋಧವನ್ನು ವ್ಯಕ್ತ ಪಡಿಸಿವೆ. ನವೆಂಬರ್ ಒಂಬತ್ತರಂದು, ಉರ್ದು ಹಬ್ಬ ಆಯೋಜಿಸಲು ಸರ್ಕಾರ ನಿರ್ಧರಿಸಿದೆ ಎಂದು ಆರೋಗ್ಯ ಸಚಿವ ಯುಟಿ ಖಾದರ್ ಹೇಳಿದ್ದರು.

ಉರ್ದು ಹಬ್ಬವನ್ನು ಆಯೋಜಿಸಲು ವಿಧಾನಸೌಧವನ್ನು ಬಳಸಿಕೊಂಡರೆ, ಮುಂದಿನ ದಿನಗಳಲ್ಲಿ ಭಾಷಾವಾರು ಸಾಂಸ್ಕೃತಿಕ ಕಾರ್ಯಕ್ರಮಗಳ ಶಾಶ್ವತ ವೇದಿಕೆಯಾಗುವುದಿಲ್ಲವೇ ಎಂದು ಬಿಜೆಪಿ ಶಾಸಕ ಸುರೇಶ್ ಕುಮಾರ್ ಪ್ರಶ್ನಿಸಿದ್ದಾರೆ. ಉರ್ದು ಹಬ್ಬ ಓಲೈಕೆಯೇ ಹೊರೆತು ಇದರಿಂದ ಕನ್ನಡಿಗರಿಗೆ ಯಾವ ಉಪಯೋಗ ಇಲ್ಲ ಎಂದು ಕನ್ನಡ ಪರ ಸಂಘಟನೆಗಳು ನಿಲುವನ್ನು ತಾಳಿವೆ.

**ಕರವೇ ರಾಜ್ಯಾಧ್ಯಕ್ಷರಾದ ಟಿಎ ನಾರಾಯಣ ಗೌಡ್ರ ನಿಲುವು:** ಕರವೇ ರಾಜ್ಯಾಧ್ಯಕ್ಷರಾದ ಟಿಎ ನಾರಾಯಣ ಗೌಡ್ರು ಈ ಸಂಬಂಧ ಟ್ವೀಟ್ (ಎಕ್ಸ್) ಮಾಡಿದ್ದಾರೆ. "ವಿಧಾನಸೌಧದ ಮೆಟ್ಟಿಲುಗಳ ಮೇಲೆ ರಾಜ್ಯ ಸರ್ಕಾರ ಉರ್ದು ಹಬ್ಬ ಆಯೋಜಿಸುವ ನಿರ್ಧಾರ ಮಾಡಿದೆ ಎಂಬ ಮಾಧ್ಯಮ ವರದಿಗಳನ್ನು ಗಮನಿಸಿದೆ. ಇದೊಂದು ಅವಿವೇಕದ, ಅಪ್ರಬುದ್ಧ, ದುರಹಂಕಾರದ ನಡೆ. ಏನು ಮಾಡಿದರೂ ನಡೆಯುತ್ತದೆ ಎಂಬ ಅಧಿಕಪ್ರಸಂಗದ ನಿಲುವು. ಸರ್ಕಾರವೇ ಮುಂದೆ ನಿಂತು ಸಮಾಜದ ಸ್ವಾಸ್ಥ್ಯ ವನ್ನು ಹಾಳು ಮಾಡಲು ನಿಂತ ಹಾಗೆ ಕಾಣುತ್ತಿದೆ. ಇದನ್ನು ಕರ್ನಾಟಕ ರಕ್ಷಣಾ ವೇದಿಕೆ ತೀವ್ರ ವಾಗಿ ಖಂಡಿಸುವುದು ಮಾತ್ರವಲ್ಲ, ಈ ಕಾರ್ಯಕ್ರಮ ನಡೆಯಲು ಯಾವುದೇ ಕಾರಣಕ್ಕೂ ಅವಕಾಶ ನೀಡುವುದಿಲ್ಲ" ಎಂದು ಬರೆದಿದ್ದಾರೆ.

## ಕೇಂದ್ರ ಸರ್ಕಾರದಿಂದ ತುರ್ತು ನೆರವು ಕೋರಿದ ಉಪಮುಖ್ಯಮಂತ್ರಿ ಜಿ. ಪರಮೇಶ್ವರ

# ಬರಗಾಲದಿಂದಾಗಿ 40,000 ಕೋಟಿ ರೂ.ಗೂ ಅಧಿಕ ಬೆಳೆ ನಷ್ಟ

**ಬೆಂಗಳೂರು:** ಕರ್ನಾಟಕದಲ್ಲಿ ತೀವ್ರಗೊಳ್ಳುತ್ತಿರುವ ಬರಗಾಲದಿಂದಾಗಿ ಬೆಳೆ ನಷ್ಟವು 40,000 ಕೋಟಿ ರೂ.ಗೂ ಅಧಿಕವಾಗಬಹುದೆಂದು ಅಂದಾಜಿಸಲಾಗಿದ್ದು, ಉಪ ಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಜಿ. ಪರಮೇಶ್ವರ್ ಅವರು ಕೇಂದ್ರ ಸರ್ಕಾರದಿಂದ ತುರ್ತು ನೆರವನ್ನು ಕೋರಿದ್ದಾರೆ; ಇದರಲ್ಲಿ ಬರ ಪರಿಹಾರದ ತ್ವರಿತ ಮೌಲ್ಯಮಾಪನ ಮತ್ತು ಬಿಡುಗಡೆಗೆ ಅವರು ಮನವಿ ಮಾಡಿದ್ದಾರೆ.



ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಬರೆದ ಪ್ರತ್ಯೇಕ ಪತ್ರಗಳಲ್ಲಿ, ಪರಮೇಶ್ವರ್ ಅವರು ಇಲ್ಲಿಯವರೆಗೆ 177 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದೆ ಮತ್ತು ಸುಮಾರು 47.09 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ 46,324.5 ಕೋಟಿ ರೂ. ಮೌಲ್ಯದ ಬೆಳೆ ನಷ್ಟವಾಗಿದೆ ಎಂದು ತಿಳಿಸಿದ್ದಾರೆ.

ರಾಜ್ಯ ಆರಂಭದಲ್ಲಿ 101 ಬರಪೀಡಿತ ತಾಲೂಕುಗಳಿಗಾಗಿ 3,705.30 ಕೋಟಿ ರೂ. ಕೋರಿ ಖಾರಿಫ್ 2026ರ ಬರಗಾಲದ ಮನವಿಯನ್ನು ಸಲ್ಲಿಸಿತ್ತು. ನಂತರದ ವೈಜ್ಞಾನಿಕ ಮೌಲ್ಯಮಾಪನದ ಬಳಿಕ, ಎರಡನೇ ಹಂತದಲ್ಲಿ ಇನ್ನೂ 76 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಯಿತು.

ಪ್ರಸ್ತುತ ಇನ್ನೂ 40 ತಾಲೂಕುಗಳಲ್ಲಿ ಸ್ಥಳ ಪರಿಶೀಲನೆ ನಡೆ–ಯುತ್ತಿದ್ದು, ಮುಂಗಾರು ಹಂಗಾಮಿನ ಅಂತ್ಯದ ವೇಳೆಗೆ ಬರಪೀಡಿತ ತಾಲೂಕುಗಳ ಸಂಖ್ಯೆ 220ನ್ನು ದಾಟಬಹುದು. ಹೊಸದಾಗಿ ಘೋಷಿಸಲಾದ 76 ತಾಲೂಕುಗಳಲ್ಲಿ ನಡೆಸಿದ ಬೆಳೆ ನಷ್ಟದ ಮೌಲ್ಯಮಾಪನದಲ್ಲಿ, 26.08 ಲಕ್ಷ ಹೆಕ್ಟೇರ್ ಕೃಷಿ ಬೆಳೆಗಳು ಮತ್ತು 1.49 ಲಕ್ಷ ಹೆಕ್ಟೇರ್ ತೋಟಗಾರಿಕಾ ಬೆಳೆಗಳಿಗೆ ಹಾನಿಯಾಗಿರುವುದು ಕಂಡುಬಂದಿದೆ. ಈ ಹಾನಿಯ ಪ್ರಮಾಣವು ಶೇ. 33 ರಿಂದ ಶೇ. 100 ರಷ್ಟಿದ್ದು, ಬಾಧಿತ ಪ್ರದೇಶದ ಗಮನಾರ್ಹ ಭಾಗದಲ್ಲಿ ಶೇ. 50 ಕ್ಕಿಂತ ಹೆಚ್ಚು ನಷ್ಟ ಸಂಭವಿಸಿದೆ. ಒಟ್ಟಾರೆಯಾಗಿ 177 ಬರಪೀಡಿತ ತಾಲೂಕುಗಳಲ್ಲಿ ಸುಮಾರು 47.09 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ನಷ್ಟ ವರದಿಯಾಗಿದ್ದು, ಅಂದಾಜು ಆರ್ಥಿಕ ನಷ್ಟವು 46,324.5 ಕೋಟಿ ರೂ. ತಲುಪಿದೆ. ನಡೆಯುತ್ತಿರುವ ಮೌಲ್ಯಮಾಪನದ ಆಧಾರದ ಮೇಲೆ, ಖಾರಿಫ್ 2026ರ ಅವಧಿಯಲ್ಲಿ ಒಟ್ಟು ಬೆಳೆ ನಷ್ಟವು 55 ಲಕ್ಷ ಹೆಕ್ಟೇರ್ ಪ್ರದೇಶವನ್ನು ಮೀರುವ ಸಾಧ್ಯತೆಯಿದೆ ಎಂದು ತಿಳಿಸಿದ್ದಾರೆ.

ಸಮಾಲೋಚನೆ ಸುದ್ದಿ
ಕನ್ನಡ ದಿನ ಪತ್ರಿಕೆ
SAMALOCHANE RANEBENNURSUDDI
Kannada Daily Morning

# ಸೀಜನ್ ಆರಂಭಕ್ಕೂ ಮುನ್ನವೇ ಮೆಣಸಿನಕಾಯಿಗೆ ಭರ್ಜರಿ ದರ!

## ಕಳೆದ ವರ್ಷದ ದಾಖಲೆ ದರ ಮುರಿಯುವ ನಿರೀಕ್ಷೆ । ಡಬ್ಬಿ ತಳಿ ಕ್ವಿಂಟಲ್‌ಗೆ 1 ರೂ ಲಕ್ಷ ದಾಟುವ ಲೆಕ್ಕಾಚಾರ?



**ಗಣೇಶ ಎಸ್.ಎ. ಬ್ಯಾಡಗಿ**

2026–27ನೇ ಸಾಲಿನ ಮೆಣಸಿನಕಾಯಿ ಸೀಜನ್ ಅಧಿಕೃತವಾಗಿ ಆರಂಭಕ್ಕೂ ಮುನ್ನವೇ ಬ್ಯಾಡಗಿ ಮಾರುಕಟ್ಟೆಯಲ್ಲಿ ಮೆಣಸಿನಕಾಯಿಯ ಮೂರು ಪ್ರಮುಖ ತಳಿಯ ಮೆಣಸಿನಕಾಯಿಗೆ ಉತ್ತಮ ದರ ದೊರೆಯುತ್ತಿರುವುದು ರೈತರು ಹಾಗೂ ವ್ಯಾಪಾರಸ್ಥರ ಲ್ಲಿ ಹೊಸ ನಿರೀಕ್ಷೆ ಮೂಡಿಸಿದ್ದು, ಕಳೆದ ವರ್ಷದ ದಾಖಲೆ ಬೆಲೆಯನ್ನು (90 ಸಾವಿರ) ಈ ಬಾರಿ ದಾಟುವ ಸಾಧ್ಯತೆ ಇದೆ ಎಂಬ ಲೆಕ್ಕಾಚಾರ ಮಾರುಕಟ್ಟೆ ವಲಯದಲ್ಲಿ ಜೋರಾಗಿದೆ

ಕಳೆದ ಸಾಲಿನಲ್ಲಿ ಡಬ್ಬಿ ತಳಿಯ ಮೆಣಸಿನಕಾಯಿ ಕ್ವಿಂಟಲ್‌ಗೆ 89,999 ರ ವರೆಗೆ ದರ ಪಡೆದು ಬ್ಯಾಡಗಿ ಮೆಣಸಿನಕಾಯಿ ಮಾರು ಕಟ್ಟೆಯ ಇತಿಹಾಸದಲ್ಲೇ ಹೊಸ ದಾಖಲೆ ನಿರ್ಮಿಸಿತ್ತು. ಇದೇ ವೇಳೆ ಕಡ್ಡಿ ತಳಿಯ ಮೆಣಸಿನಕಾಯಿಯೂ ಕ್ವಿಂಟಲ್‌ಗೆ ಸುಮಾರು 75 ಸಾವಿರದವರೆಗೆ ಬೆಲೆ ಪಡೆದು ಗಮನ ಸೆಳೆದಿತ್ತು. ಇದೀಗ ಹೊಸ ಸೀಜನ್ ಆರಂಭಕ್ಕೂ ಮುನ್ನವೇ ಉತ್ತಮ ದರ ಕಂಡು ಬರುತ್ತಿರುವ ಹಿನ್ನೆಲೆಯಲ್ಲಿ ಈ ಬಾರಿ ದಾಖಲೆ ಬೆಲೆ ಮತ್ತಷ್ಟು ಏರಿಕೆಯಾಗುವ ನಿರೀಕ್ಷೆ ವ್ಯಕ್ತವಾಗಿದೆ.

**ಡಬ್ಬಿ ತಳಿ 1 ಲಕ್ಷದ ಗಡಿ ದಾಟುತ್ತಾ?:** ರಾಜ್ಯ ಸೇರಿದಂತೆ ಮೆಣಸಿನಕಾಯಿ ಬೆಳೆಯುವ ಪ್ರಮುಖ ಪ್ರದೇಶಗಳಾದ ಬಳ್ಳಾರಿ, ಆಂಧ್ರ ಪ್ರದೇಶ ಹಾಗೂ ತೆಲಂಗಾಣ, ಶ್ರೀಶೈಲಂ, ಅನಂತಪುರ, ಕರ್ನಾಟಕದ ಕುಂದಗೋಳ, ಸಂಶಿ, ಅಣ್ಣಿಗೇರಿ, ಗದಗ, ಬೆಟಗೇರಿ, ಸೇರಿ ದಂತೆ ಹಲವು ಭಾಗಗಳಲ್ಲಿ ಮಳೆ ಕೊರತೆ ಹೆಚ್ಚಾಗಿದ್ದು ಇದರಿಂದ ಉತ್ಪಾದನೆ ಕುಂಠಿತವಾಗಿರುವುದು ಮಾರುಕಟ್ಟೆಯ ಮೇಲೆ ಪರಿ ಣಾಮ ಬೀರುವ ಸಾಧ್ಯತೆ ಇದೆ. ಉತ್ಪಾದನೆ ಕಡಿಮೆಯಾಗಿ ಮಾರುಕಟ್ಟೆಗೆ ಆವಕ ಕುಸಿದರೆ ಸಹಜವಾಗಿಯೇ ಬೇಡಿ–ಕೆ ಪೂರೈ ಕೆಯ ಅಂತರ ಹೆಚ್ಚಾಗಿ ಬೆಲೆ ಮತ್ತಷ್ಟು ಏರಿಕೆಯಾಗುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಉತ್ತಮ ಗುಣಮಟ್ಟ ದ ಡಬ್ಬಿ ತಳಿಯ ಮೆಣಸಿನಕಾಯಿ ಕ್ವಿಂಟಲ್‌ಗೆ 1 ಲಕ್ಷದ ಗಡಿ ದಾಟಬಹುದು ಎಂಬ ನಿರೀಕ್ಷೆ ರೈತರು ಹಾಗೂ ವ್ಯಾಪಾರ ವಲ ಯ ದಲ್ಲಿ ಕೇಳಿಬರುತ್ತಿದೆ.

**ಆವಕ ಕಡಿಮೆ, ಬೆಲೆ ಹೆಚ್ಚು:** ಮೆಣಸಿನಕಾಯಿ ಮಾರುಕಟ್ಟೆಯಲ್ಲಿ ಸಾಮಾನ್ಯವಾಗಿ ಆವಕ ಪ್ರಮಾಣ, ಗುಣಮಟ್ಟ, ಬೇಡಿಕೆ, ರಫ್ತು ಪರಿಸ್ಥಿತಿ ಹಾಗೂ ಉತ್ಪಾದನೆಯ ಪ್ರಮಾಣ ಬೆಲೆ ನಿರ್ಧರಿಸುವ ಪ್ರಮುಖ ಅಂಶಗಳಾಗಿವೆ. ಈ ಬಾರಿ ಉತ್ಪಾದನೆ ನಿರೀಕ್ಷೆಯಂತೆ ಆಗದೆ ಆವಕ ಕಡಿಮೆಯಾದರೆ, ಉತ್ತಮ ಗುಣಮಟ್ಟದ ಮೆಣಸಿನಕಾಯಿಗೆ ಸ್ಪರ್ಧಾತ್ಮಕ ದರ ದೊರೆಯುವ ಸಾಧ್ಯತೆ ಹೆಚ್ಚಾಗಲಿದೆ. ವಿಶೇ ಷವಾಗಿ ಬಣ್ಣ, ಗುಣಮಟ್ಟ ಹಾಗೂ ತೇವಾಂಶದ ಪ್ರಮಾಣಕ್ಕೆ ಅನುಗುಣವಾಗಿ ದರದಲ್ಲಿ ಸಾಕಷ್ಟು ವ್ಯತ್ಯಾಸ ಕಂಡುಬರಬಹುದು. ಹೀಗಾಗಿ ರೈತರು ಗುಣಮಟ್ಟದ ಉತ್ಪನ್ನವನ್ನು ಮಾರುಕಟ್ಟೆಗೆ ತರುವುದರೊಂದಿಗೆ, ದರದ ಏರಿಳಿತ ಗಮನಿಸಿ ಮಾರಾಟ ಮಾಡುವ ಅಗತ್ಯವೂ ಇದೆ.

**3 ಸಾವಿರ ಕೋಟಿ ವಹಿವಾಟು ಮತ್ತೊಮ್ಮೆ?:** ಬ್ಯಾಡಗಿ ಮೆಣಸಿನಕಾಯಿ ಮಾರುಕಟ್ಟೆ ದೇಶ ವಿದೇಶಗಳಲ್ಲಿ ತನ್ನದೇ ಆದ ಮಾರುಕಟ್ಟೆ ಹೊಂದಿದ್ದು, ಸಾವಿರಾರು ರೈತರು ಹಾಗೂ ನೂರಾರು ವ್ಯಾಪಾರಸ್ಥರಿಗೆ ಪ್ರಮುಖ ವಾಣಿಜ್ಯ ಕೇಂದ್ರವಾಗಿದೆ. ಕಳೆದ ಸಾಲಿನಲ್ಲಿ ಮಾರುಕಟ್ಟೆಯಲ್ಲಿ ಸುಮಾರು 3 ಸಾವಿರ ಕೋಟಿಗೂ ಅಧಿಕ ವಹಿವಾಟು ನಡೆದಿದ್ದು, ಪ್ರಸಕ್ತ ಸಾಲಿನಲ್ಲೂ ಈ ಪ್ರಮಾಣವನ್ನು ಮೀರಿಸುವ ನಿರೀಕ್ಷೆ ವ್ಯಾಪಾರ ವಲಯದಲ್ಲಿದೆ. ಬೆಲೆ ಹೆಚ್ಚಾದ ಸಂದರ್ಭದಲ್ಲಿ ಆವಕ ಪ್ರಮಾಣ ಸ್ವಲ್ಪ ಕಡಿಮೆಯಾದರೂ, ಪ್ರತಿ ಕ್ವಿಂಟಲ್‌ಗೆ ದೊರೆಯುವ ಹೆಚ್ಚಿನ ದರದಿಂದ ಒಟ್ಟು ವಹಿವಾಟಿನ ಮೊತ್ತ ಹೆಚ್ಚಾಗುವ ಸಾಧ್ಯತೆ ಇದೆ. ಹೀಗಾಗಿ ಪ್ರಸಕ್ತ ಸಾಲಿನಲ್ಲಿ 3 ಸಾವಿರ ಕೋಟಿ ವಹಿವಾಟಿನ ದಾಖಲೆ ಮತ್ತೊಮ್ಮೆ ದಾಟುವ ವಿಶ್ವಾಸ ವ್ಯಾಪಾರಸ್ಥರಲ್ಲಿ ಮೂಡಿದೆ.

### ಆಶಾಭಾವ ಮೂಡಿಸಿದ ದರ

ಕಳೆದ ಕೆಲ ವರ್ಷಗಳಿಂದ ಬೆಳೆ ವೆಚ್ಚ, ಕಾರ್ಮಿಕರ ಕೊರತೆ, ಹವಾಮಾನ ವೈಪರೀತ್ಯ ಸೇರಿದಂತೆ ಹಲವು ಸವಾಲುಗಳನ್ನು ಎದುರಿಸುತ್ತಿರುವ ಮೆಣಸಿನಕಾಯಿ ಬೆಳೆಗಾರರಿಗೆ ಪ್ರಸಕ್ತ ಸಾಲಿನ ಆರಂಭಿಕ ದರಗಳು ಆಶಾಭಾವನೆ ಮೂಡಿಸಿವೆ. ಆದರೆ ಮಾರುಕಟ್ಟೆಗೆ ಹೆಚ್ಚಿನ ಪ್ರಮಾಣದಲ್ಲಿ ಆವಕ ಆರಂಭವಾದ ಬಳಿಕ ದರದಲ್ಲಿ ಏರಿಳಿತವಾಗುವ ಸಾಧ್ಯತೆ ಇರುವು ದರಿಂದ ಅಂತಿಮ ದರದ ಚಿತ್ರಣ ಸೀಜನ್‌ನ ಪೂರ್ಣ ಪ್ರಮಾಣದ ಆವಕ ಆರಂಭವಾದ ನಂತರವೇ ಸ್ಪಷ್ಟವಾಗಲಿದೆ.

"ಬ್ಯಾಡಗಿ ಮೆಣಸಿನಕಾಯಿ ಮಾರುಕಟ್ಟೆಯಲ್ಲಿ ಗುಣಮಟ್ಟದ ಮೆಣಸಿನಕಾಯಿಗೆ ಯಾವತ್ತೂ ಉತ್ತಮ ದರ ಸಿಗಲಿದೆ. ಈ ವರ್ಷ ಮಳೆ ಕೊರತೆಯ ಹಿನ್ನೆಲೆಯಲ್ಲಿ ಮೆಣಸಿನಕಾಯಿ ಆವಕ ಪ್ರಮಾಣ ಕಡಿಮೆಯಾಗುವ ಸಾಧ್ಯತೆ ಇದೆ. ಮಾರುಕಟ್ಟೆಯಲ್ಲಿ ಬೇಡಿಕೆ ಮತ್ತು ಪೂರೈಕೆಯ ಪ್ರಮಾಣವನ್ನು ಆಧರಿಸಿಯೇ ದರ ನಿಗದಿಯಾಗಲಿದೆ. ಗುಣಮಟ್ಟದ ಮೆಣಸಿನಕಾಯಿಗೆ ಹೆಚ್ಚಿನ ಬೇಡಿಕೆ ಮುಂದುವರಿಯುವ ನಿರೀಕ್ಷೆಯಿದೆ."

। ಸುರೇಶಗೌಡ ಪಾಟೀಲ, ಅಧ್ಯಕ್ಷರು, ವರ್ತಕರ ಸಂಘ ಬ್ಯಾಡಗಿ

### ದಾಖಲೆ ದರ ಖುಷಿಯಲ್ಲಿ ರೈತ

ಕಳೆದ ಐದಾರು ತಿಂಗಳಿನಿಂದ ಮಾರುಕಟ್ಟೆಯಲ್ಲಿ ಉತ್ತಮ ಗುಣಮಟ್ಟದ ಡಬ್ಬಿ 75 ಸಾವಿರ, ಕಡ್ಡಿ 72 ಸಾವಿರ, ಸೇರಿದಂತೆ ಗೂಂ ಟೂರ ಮೆಣಸಿನಕಾಯಿ ಪ್ರತಿ ಕ್ವಿಂಟಾಲಗೆ 25 ಸಾವಿರ ದರಕ್ಕೆ ಮಾರಾಟವಾಗುತ್ತಿದೆ.



# ನಿವೃತ್ತಿಯ ಬದುಕು ಹಸನಾಗಲಿ

ಹಾವೇರಿ: ತಮ್ಮ ವೃತ್ತಿ ಹಾಗೂ ಪ್ರವೃತ್ತಿಯಲ್ಲಿ ಪ್ರಮಾಣಿಕತೆಯನ್ನು ರೂಡಿಸಿಕೊಂಡು ಯಶಸ್ವಿಯಾಗಿ ನಿವೃತ್ತಿಯಾದ ಮುನಿಶ್ವರ ಎಚ್ ಚೂರಿ ಅವರ ನಿವೃತ್ತಿಯ ಬದುಕು ಹಸನಾಗಲಿ ಎಂದು ಕರ್ನಾಟಕ ರಾಜ್ಯ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಮತ್ತು ಹಿಂದುಳಿದ ವರ್ಗ,ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ(ರಿ)ಯ ರಾಜ್ಯಾಧ್ಯಕ್ಷರಾದ ಉಡಚಪ್ಪ ಮಾಳಗಿ ಹೇಳಿದರು.

ಇಲ್ಲಿನ ಸರ್ಕಾರಿ ನೌಕರರ ಭವನದಲ್ಲಿ ಕರ್ನಾಟಕ ರಾಜ್ಯ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಮತ್ತು ಹಿಂದುಳಿದ ವರ್ಗ,ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ(ರಿ)ಯ ವತಿಯಿಂದ ಮುನಿಶ್ವರ ಎಚ್ ಚೂರಿ ಅವರಿಗೆ ಗೌರವಿಸಿ ಸನ್ಮಾನಿಸಿ ಅವರು ಮಾತನಾಡಿದರು.

ಮುನಿಶ್ವರ ಚೂರಿ ಅವರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಅಪರಾಧಿಗಳ ಪರವೀಕ್ಷಣಾ ಅಧಿನಿಯಮ ಇಲ್ಲಿ ಪರವೀಕ್ಷಣಾಧಿಕಾರಿಗಳಾಗಿ ಕಾರ್ಯನಿರ್ವಹಣೆ ಮಾಡಿದ್ದು,ತಮ್ಮಲ್ಲಿ ಬಂದತಹ ಜನರಿಗೆ ಉತ್ತಮವಾಗಿ ಸ್ಪಂದಿಸಿ,ಉತ್ತಮ ಸೇವೆ ಮಾಡಿದ್ದಾರೆ.ಸರ್ಕಾರಿ ನೌಕರರ ಸಂಘದ ರಾಜ್ಯ ಪರಿಷತ್ ಸದಸ್ಯರಾಗಿ ನಿರಂತರವಾಗಿ ನೌಕರರ ಜೊತೆಗೂ ಉತ್ತಮ ಬಾಂಧವ್ಯ ಹೊಂದಿದ್ದಾರೆ. ಯಾವಾಗಲೂ ಕ್ರಿಯಾತ್ಮಕವಾಗಿ ಚಿಂತನೆ ಮಾಡುತ್ತಾ ಎಲ್ಲರೊಂದಿಗೆ ಸಹಕಾರ ಮನೋಭಾವನೆ ಹೊಂದಿದ್ದಾರೆ. ಮುನಿಶ್ವರ ಚೂರಿ ಅವರಿಗೆ ದೇವರು ಆರೋಗ್ಯ ಆಯುಷ್ಯ ನೀಡಿ ನಿವೃತ್ತಿಯ ಬದುಕು ಹಸನಾಗಲಿ ಎಂದು ಉಡಚಪ್ಪ ಮಾಳಗಿ ಶುಭ ಕೋರಿದರು.

ನಿವೃತ್ತಿಯಾದ ಮುನಿಶ್ವರ ಎಚ್ ಚೂರಿ ಮಾತನಾಡಿ ನಮಗೆ ಅನ್ನ ನೀಡಿದ ಸರ್ಕಾರಿ ನೌಕರಿಯನ್ನು ಗೌರವ ಪೂರ್ವಕವಾಗಿ ಮಾಡಿದ್ದೇನೆ ಎಂಬ ಆತ್ಮ ಸಂತೋಷವಿದೆ.ಸಹಕಾರ ನೀಡಿದ ಸರ್ವರಿಗೂ ಧನ್ಯವಾದಗಳು.ಈ ದಿನ ನನ್ನನ್ನು ಹಾಗೂ ಧರ್ಮಪತ್ನಿಯನ್ನು ಗೌರವಿಸಿ ಸನ್ಮಾನಿಸಿದ್ದು,ನಿಮಗೆ ಅಬಾರಿಯಾಗಿದ್ದೇವೆ ಎಂದರು.

ನಿವೃತ್ತಿಯಾದ ಮುನಿಶ್ವರ ಎಚ್ ಚೂರಿ ಅವರ ಧರ್ಮಪತ್ನಿ ಶ್ರೀಮತಿ ಮಂಜುಳಾ ಚೂರಿ ಅವರನ್ನು ವಿವಿಧ ಸಂಘ ಸಂಸ್ಥೆ,ಗಣ್ಯರು,ಅಭಿಮಾನಿಗಳು ಗೌರವಿಸಿ ಸನ್ಮಾನಿಸಿದರು.ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಮಲ್ಲೇಶ ಕರಿಗಾರ,ಕಾರ್ಯದರ್ಶಿ ಜಿ.ಎಸ್ ಪಾಟೀಲ,ಖಜಾಂಚಿ ದಾವಲಸಾಬ ಕಮಗಾರ,ಉದಯ ಕುರಡೇಕರ, ಶೇಖಪ್ಪ ಕಲ್ಲಮ್ಮನವರ,ಪಿ.ಎಸ್ ಪಾಟೀಲ,ಸಿ.ಜಿ.ಬ್ಯಾಡಗಿ,ಕಲ್ಯಾಣ ಸಮಿತಿ(ರಿ)ಯ ಜಿಲ್ಲಾಧ್ಯಕ್ಷರಾದ ಮಂಜಪ್ಪ ಮರೋಳ,ಮುಖಂಡರಾದ ನಾಗರಾಜ ಮಳಗಿ,ಮಾಲತೇಶ ಯಲ್ಲಾಪುರ,ಅಶೋಕ ಮರೆಣ್ಣನವರ,ಗುರುನಾಥ ದಾವಣ್ಣಕೇರ,ದುರಗೇಶ ಮೇಗಲಮನಿ,ಎಸ್.ಎಚ್.ಕಳ್ಳಿಮನಿ,ಡಿ,ಹೆಚ್ ವಾಲ್ಮೀಕಿ,ಕೃಷ್ಣ ಕರ್ಜಗಿ,ಬಸವಣ್ಣೆಪ್ಪ ಅಳ್ಳಳ್ಳಿ,ಶ್ರೀಮತಿ ಅಂಜನಾದೇವಿ ಉಡಚಪ್ಪ ಮಾಳಗಿ,ಶ್ರೀಮತಿ ಮಂಜುಳಾ ಅಶೋಕ ಮರೆಣ್ಣನವರ,ಶ್ರೀಮತಿ ಲತಾ ಶೇಖರ ಕಳ್ಳಿಮನಿ,ಶಿವಕುಮಾರ ತಳವಾರ,ಪೃಥ್ವಿ ಹಾಗೂ ಗಗನಾ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.



# ಸಾಲ ಮನ್ನಾ, ಸಮರ್ಪಕ ವಿದ್ಯುತ್ ಪೂರೈಕೆ, ಬೆಳೆ ವಿಮೆಗೆ ಆಗ್ರಹ
# ರೈತರ ಸಮಸ್ಯೆಗೆ ಸ್ಪಂದಿಸಿ, ಇಲ್ಲವೇ ಹೋರಾಟ ಎದುರಿಸಿ

**ಸಮಾಲೋಚನೆ ಸುದ್ದಿ ಬ್ಯಾಡಗಿ**

7 ತಾಸು ಸಮರ್ಪಕ ವಿದ್ಯುತ್ ಪೂರೈಕೆ, 25 ಸಾವಿರ ರೂ ಬರ ಪರಿಹಾರ ಮೂಲಕ ರೈತರಿಗೆ ಸೂಕ್ತ ನೆರವು, ಕೃಷಿ ಸಾಲ ಮನ್ನಾ, ಬೆಳೆ ವಿಮೆ ವಿತರಣೆ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘದ ಸದಸ್ಯರು ಪಟ್ಟಣದಲ್ಲಿ ಗುರುವಾರ ಪ್ರತಿಭಟನೆ ನಡೆಸಿ, ತಹಸೀಲ್ದಾರ್ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಪಟ್ಟಣದರೈತಸಂಘದಕಾರ್ಯಾಲಯದಿಂದಆರಂಭಗೊಂಡ ಪ್ರತಿಭಟನಾ ಮೆರವಣಿಗೆಯು ಪ್ರಮುಖ ಬೀದಿಗಳಲ್ಲಿ ಸಂಚರಿಸಿ ತಹಸೀಲ್ದಾರ್ ಕಚೇರಿ ತಲುಪಿತು. ಈ ವೇಳೆ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ ರೈತರು, ಕೃಷಿ ಕ್ಷೇತ್ರ ಎದುರಿಸುತ್ತಿರುವ ಸಂಕಷ್ಟಗಳಿಗೆ ತಕ್ಷಣ ಸ್ಪಂದಿಸಿ ರೈತರ ನೆರವಿಗೆ ಧಾವಿಸುವಂತೆ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ರೈತ ಮುಖಂಡ ಮಲ್ಲಿಕಾರ್ಜುನ ಬಳ್ಳಾರಿ, ಪ್ರಸಕ್ತ ವರ್ಷ ಹಾವೇರಿ ಜಿಲ್ಲೆಯನ್ನು ಬರಪೀಡಿತ ಜಿಲ್ಲೆ ಎಂದು ಘೋಷಿಸಲು ಸರ್ಕಾರ ಹಿಂದೇಟು ಹಾಕಿತ್ತು. ರೈತ ಸಂಘದ ನಿರಂತರ ಹೋರಾಟದ ಫಲವಾಗಿ ಕೊನೆಗೂ ಜಿಲ್ಲೆ ಯನ್ನು ಬರಪೀಡಿತ ಎಂದು ಘೋಷಿಸಲಾಗಿದೆ.ಆದರೆ, ಬರದಿಂದ ಕಂಗೆಟ್ಟಿರುವ ರೈತರಿಗೆ ಸೂಕ್ತ ಪರಿಹಾರ ನೀಡುವ ಬದಲು ಕೇವಲ 2,500 ರೂ ಪರಿಹಾರ ಘೋಷಿಸಿರುವುದು ಖಂಡನೀಯ. ಸರಕಾರ ಇಷ್ಟೇ ಮೊತ್ತವನ್ನು ರೈತರಿಗೆ ಪಾವತಿಸಿದರೆ, ರೈತರು ಅದಕ್ಕೆ ಮತ್ತೆ 100 ರೂ ಸೇರಿಸಿ ಸರಕಾರಕ್ಕೆ ವಾಪಸ್ ನೀಡಲಿದ್ದಾರೆ ಎಂದು ಎಚ್ಚರಿಸಿದರು.

**ವಿಮೆ ಕಂಪಮಿಗಳ ಮೋಸ:** ರೈತ ಮುಖಂಡ ರುದ್ರನಗೌಡ ಕಾಡನಗೌಡ್ರು ಮಾತನಾಡಿ, ಕೃಷಿ ಇಲಾಖೆಯ ವರದಿಯನ್ನು ಆಧರಿಸಿ ಸರಕಾರ ಹಾವೇರಿ ಜಿಲ್ಲೆಯನ್ನು ಬರಪೀಡಿತ ಎಂದು ಘೋಷಿಸಿದೆ. ಆದರೆ, ಬೆಳೆ ವಿಮೆ ಕಂಪನಿಗಳು ರೈತರಿಗೆ ಅನ್ಯಾಯ ಮಾಡುತ್ತಿವೆ. ಸರಕಾರವೇ ಬರಗಾಲ ಘೋಷಣೆ ಮಾಡಿದ್ದರೂ ವಿಮೆ ಕಂಪನಿಗಳು ರೈತರ ಹೊಲಗಳಿಗೆ ಭೇಟಿ ನೀಡಿ ಆಣೆವಾರಿ ಪ್ರಕ್ರಿಯೆ ನಡೆಸುತ್ತಿರುವುದು ಎಷ್ಟು ಸಮಂಜಸ ಎಂದು ಪ್ರಶ್ನಿಸಿದರು. ಬರಗಾಲದ ಹಿನ್ನೆಲೆಯಲ್ಲಿ ಎಲ್ಲಾ ರೈತರಿಗೆ ಬೆಳೆ ವಿಮೆ ಪರಿ ಹಾರ ದೊರೆಯುವಂತೆ ಕ್ರಮ ಕೈಗೊಳ್ಳಬೇಕು.ಪ್ರತಿ ವರ್ಷ ಬೆಳೆ ವಿಮೆ ವಿಚಾರದಲ್ಲಿ ರೈತರು ಸಂಕಷ್ಟ ಎದುರಿಸುತ್ತಿದ್ದು, ಈ ಬಾರಿ ಯೂ ವಿಮೆ ಕಂಪನಿಗಳು ರೈತರಿಗೆ ಅನ್ಯಾಯ ಮಾಡಲು ಮುಂದಾಗಿವೆ. ಸರಕಾರ ಮಧ್ಯಪ್ರವೇಶಿಸಿ ರೈತರಿಗೆ ನ್ಯಾಯ ಒದಗಿ ಸಬೇಕು ಎಂದು ಒತ್ತಾಯಿಸಿದರು.



ಮಳೆ ಕೊರತೆ ವಿದ್ಯುತ್ ಉತ್ಪಾದನಾ ಕೊರತೆಯಿಂದ ವಿದ್ಯುತ ಪೂರೈಕೆಯಲ್ಲಿ ವ್ಯತ್ಯಾಸಾವಾಗಿದೆ ಹೊರತು ಬೇರೇ ಯಾವ ಉದ್ದೇ ಶದಿಂದ. ಇದೀಗ 1300 ಮೇಘಾವ್ಯಾಟ ವಿದ್ಯುತ್ ಖರೀದಿ ಮಾಡಲಾಗಿದ್ದು ನಾಳೆಯಿಂದ ಎಂದಿನಂತೆ 7 ತಾಸು ವಿದ್ಯುತ್ ನೀಡ ಲಾಗುವುದು.

। ರಾಜಶೇಖರ ಅರಳಿಕಟ್ಟಿ ಹೆಸ್ಕಾಂ ಎಇಇ

**7 ತಾಸು ವಿದ್ಯುತ್ ಪೂರೈಕೆ ಎಂಬ ಸುಳ್ಳು:** ಗಂಗಣ್ಣ ಎಲಿ ಮಾತನಾಡಿ, ವಿವಿಧ ಕಾರಣಗಳನ್ನು ಮುಂದಿಟ್ಟು ಹೆಸ್ಕಾಂ ಅಧಿಕಾರಿಗಳು ಕೃಷಿ ಸಂಪರ್ಕಗಳಿಗೆ ಕೇವಲ ಎರಡರಿಂದ ಮೂರು ಗಂಟೆಗಳ ಕಾಲ ವಿದ್ಯುತ್ ನೀಡುತ್ತಿದ್ದಾರೆ 7 ಗಂಟೆಗಳ ಕಾಲ ವಿದ್ಯುತ್ ಪೂ ರೈಕೆ ಮಾಡಲಾಗುತ್ತಿದೆ ಎಂಬುದು ಹಸಿ ಸುಳ್ಳು, ನಿಗದಿತ ಅವಧಿಯಷ್ಟು ವಿದ್ಯುತ್ ಯಾಕೆ ನೀಡುತ್ತಿಲ್ಲ ಎಂದು ಸ್ಪಷ್ಟಪಡಿಸಿ ಎಂದು ಸ್ಥಳದಲ್ಲಿದ್ದ ಹೆಸ್ಕಾಂ ಎಇಇ ಯನ್ನು ತರಾಟೆಗೆ ತೆಗೆದುಕೊಂಡರು.

**ಸಾಲ ಮನ್ನಾ ಮಾಡಿ:** ರೈತ ಮುಖಂಡ ಮೌನೇಶ ಕಮ್ಮಾರ ಮಾತನಾಡಿ, ಕಳೆದ ಐದಾರು ವರ್ಷಗಳಿಂದ ರೈತರು ನಿರಂತರ ನಷ್ಟ ಅನುಭವಿಸುತ್ತಿದ್ದಾರೆ. ಬೆಳೆ ಬೆಳೆಯಲು ಹಾಕಿದ ಬಂಡವಾಳವೂ ಕೈಗೆ ಬಾರದ ಸ್ಥಿತಿ ನಿರ್ಮಾಣವಾಗಿದ್ದು, ಸಾಲದ ಹೊರೆ ತಾಳ ಲಾರದೆ ಹಲವು ರೈತರು ಆತ್ಮಹತ್ಯೆಯ ದಾರಿ ಹಿಡಿಯುವಂತಾಗಿದೆ. ಕೃಷಿಯನ್ನೇ ನಂಬಿ ಬದುಕುತ್ತಿರುವ ರೈತರ ಸಂಕಷ್ಟಕ್ಕೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಸರಕಾರ ಕೂಡಲೇ ಕೃಷಿ ಸಾಲ ಮನ್ನಾ ಮಾಡಬೇಕು ಎಂದು ಆಗ್ರಹಿಸಿದರು.

**ಸಬ್ಸಿಡಿ ನೀಡಿ ರೈತರನ್ನ ಉಳಿಸಿ:** ಶಿವರುದ್ರಪ್ಪ ಮೂಡೇರ ಮಾತನಾಡಿ, ಹೊಸ ಬೋರ್‌ವೆಲ್‌ಗಳನ್ನು ಕೊರೆಸಲು ಮುಂದಾಗುವ ರೈತರಿಗೆ ಬೋರ್‌ವೆಲ್ ಕೊರೆಸುವ ವೆಚ್ಚ ಹಾಗೂ ಪಂಪ್‌ಸೆಟ್ ಅಳವಡಿಕೆಗೆ ಶೇ.100ರಷ್ಟು ಸಬ್ಸಿಡಿ ನೀಡಬೇಕು. ಇದರಿಂದ ನೀರಿನ ಕೊರತೆಯಿಂದ ಕೃಷಿ ಚಟುವಟಿಕೆ ಸ್ಥಗಿ–ತ ಗೊಳ್ಳುತ್ತಿರುವ ರೈತರಿಗೆ ಅನುಕೂಲವಾಗಲಿದ್ದು, ಕೃಷಿ ಉತ್ಪಾದನೆ ಹೆಚ್ಚಿಸಲು ಸಹಕಾರಿ ಯಾಗಲಿದೆ. ರೈತರು ನೆಮ್ಮದಿಯಿಂದ ಕೃಷಿ ನಡೆಸಿದರೆ ಮಾತ್ರ ದೇಶದ ಜನತೆಗೆ ಅನ್ನ ಒದಗಿಸಲು ಸಾಧ್ಯ ಎಂದು ಹೇಳಿದರು. ಈವೇಳೆ ಚಿಕ್ಕಪ್ಪ ಛತ್ರದ ಮಂಜು ತೋಟದ, ಮಲ್ಲೇಶಪ್ಪ ಡಂಬಳ, ಶಂಕರ ಮರಗಲ, ಆನಂದ ಸಂಕಣ್ಣನವರ, ಫಕ್ಕೀರೇಶ ಅಜಗೊಂಡರ, ಜಾನ ಪುನಿತ್, ನಿಂಗಪ್ಪ ಹೆಗ್ಗಣ್ಣನವರ ಸೇರಿದಂತೆ ನೂರಾರು ರೈತರು ಉಪಸ್ಥಿತರಿದ್ದರು.

# ಗೃಹರಕ್ಷಕರ ವೇತನ ಪಾವತಿಗೆ ಆಗ್ರಹಿಸಿ ಮನವಿ

ನವಲಗುಂದ: ಧಾರವಾಡ ಜಿಲ್ಲೆಯ ಸುಮಾರು 30 ಮಂದಿ ಗೃಹ ರಕ್ಷಕರಿಗೆ ಕಳೆದ 5 ತಿಂಗಳಿಂದ ವೇತನ ಪಾವತಿ ಮಾಡದೇ ಸತಾಯಿಸುತ್ತಿದ್ದು ಕೂಡಲೇ ಅವರಿಗೆ ಬಾಕಿ ವೇತನ ಪಾವತಿ ಮಾಡಬೇಕೆಂದು ಸಾಮಾಜಿಕ ಕಾರ್ಯಕರ್ತ ಮಾಬುಸಾಬ ಯರಗುಪ್ಪಿ ಆಕ್ರೋಶ ವ್ಯಕ್ತಪಡಿಸಿದರು.

ಈ ಕುರಿತು ತಹಶೀಲ್ದಾರ ಕಚೇರಿಯ ಶಿರಸ್ತೇದಾರ ಗಣೇಶ ಚಳ್ಳಿಕೇರಿ ಅವರ ಮೂಲಕ ಮುಖ್ಯಮಂತ್ರಿ ಹಾಗೂ ಅಬಕಾರಿ ಸಚಿವರಿಗೆ ಮನವಿ ಸಲ್ಲಿಸಿ ಮಾತನಾಡಿದ ಅವರು ಕಳೆದ ಮೇ ತಿಂಗಳಿನಿಂದ ಇಲ್ಲಿಯವರೆಗೆ ಅಂದರೆ 5 ತಿಂಗಳಿಂದ ಈ 30 ಜನ ಗೃಹರಕ್ಷಕರಿಗೆ ವೇತನ ಪಾವತಿಯಾಗಿರುವುದಿಲ್ಲ. ಇದರಿಂದಾಗಿ ಕುಟುಂಬ ನಿರ್ವಹಣೆಗಾಗಿ ಗೃಹರಕ್ಷಕರು ಪರದಾಡುತ್ತಿದ್ದಾರೆ, ಕರ್ತವ್ಯಕ್ಕೆ ಬರುವ ಗೃಹರಕ್ಷಕರಿಗೆ ವೇತನವೇ ಇಲ್ಲದಿದ್ದರೆ ಅವರು ಹೇಗೆ ಬದುಕಬೇಕು, ಇದು ಅಮಾನವೀಯ ಸಂಗತಿಯಾಗಿದೆ.

ಅಬಕಾರಿ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವಂತಹ ಸರ್ಕಾರಿ ಅಧಿಕಾರಿಗಳ ಒಂದು ತಿಂಗಳ ವೇತನವಾದರುನಿಂತಿದೆಯಾ?ಗೃಹರಕ್ಷಕರುಎಂದರೆಅಷ್ಟೊಂದುತಾತ್ಸಾರಮನೋಭಾವನೆಏಕೆಎಂದು ಅರ್ಥ ಆಗುತ್ತಿಲ್ಲಾ, ಕಳೆದ 05 ತಿಂಗಳುಗಳಿಂದ ವೇತನ ಪಾವತಿ ಮಾಡದೇ ದುಡಿಸಿಕೊಳ್ಳುತ್ತಿರುವುದು ಕಾರ್ಮಿಕ ಕಾಯ್ದೆಯ ವಿರುದ್ಧವಾಗಿದ್ದು ಕೊಡಲೇ ವೇತನ ಪಾವತಿ ಮಾಡಬೇಕು ಇಲ್ಲದಿದ್ದರೆ ಕರ್ನಾಟಕ ಲೋಕಾಯುಕ್ತದಲ್ಲಿ ಪ್ರಕರಣ ದಾಖಲಿಸಿ ಕಾನೂನು ಹೋರಾಟ ಮಾಡುತ್ತೇನೆ ಎಂದರು.

ಈ ಸಂದರ್ಭದಲ್ಲಿ ಮಹಮ್ಮದಲಿ ಮಿರ್ಜಿ, ಶರೀಪಸಾಬ ಹುಡೇದ, ಮಲ್ಲಿಕಾರ್ಜುನ ನರಸಪ್ಪನವರ, ಸಂಜು ಕುಮಾರ ಯಾಲಿಗಾರ, ಇಬ್ರಾಹಿಂ ಮುಲ್ಲಾ ಉಪಸ್ಥಿತರಿದ್ದರು.

# ಶಿಕ್ಷಣ, ಸಮಾಜ ಸೇವೆ ಗುರುತಿಸಿ ತೌಸೀಫ್ ಕಲ್ಮನಿಗೆ ಗೌರವ ಡಾಕ್ಟರೇಟ್

**ಸಮಾಲೋಚನೆ ಸುದ್ದಿ ಬ್ಯಾಡಗಿ**

ಪಟ್ಟಣದ ನಿವಾಸಿ ಹಾಗೂ ಧಾರವಾಡ ಜಿಲ್ಲೆಯ ಕುಂದಗೋಳ ತಾಲೂಕಿನ ಕೂಬಿಹಾಳ ಗ್ರಾಮದ ಎಸ್.ಯು.ಎಸ್.ಜೆ. ಸಂಯುಕ್ತ ಪದವಿ ಪೂರ್ವ ಕಾಲೇಜಿನ ಇತಿಹಾಸ ಉಪನ್ಯಾಸಕರಾದ ತೌಸೀಫ್ ಜೆ. ಕಲ್ಮನಿ ಅವರಿಗೆ ಶಿಕ್ಷಣ ಹಾಗೂ ಸಮಾಜ ಸೇವೆಯಲ್ಲಿ ಸಲ್ಲಿಸಿದ ಗಣನೀಯ ಸೇವೆಯನ್ನು ಗುರುತಿಸಿ ಗೌರವ ಡಾಕ್ಟರೇಟ್ ನೀಡಿ ಗೌರವಿಸಲಾಯಿತು.

ಹೊಸೂರಿನಲ್ಲಿ ಏಷ್ಯಾ ಇಂಟರನ್ಯಾಷನಲ್ ಕಲ್ಚರಲ್ ರಿಸರ್ಚ್ ಯೂನಿವರ್ಸಿಟಿ ವತಿಯಿಂದ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಸಾಧಕರಿಗೆ ಆಯೋಜಿಸಿದ್ದ ಗೌರವ ಡಾಕ್ಟರೇಟ್ ಪದವಿ ಪ್ರದಾನ ಸಮಾರಂಭದಲ್ಲಿ ತೌಸೀಫ್ ಕಲ್ಮನಿ ಅವರಿಗೆ ಗೌರವ ಡಾಕ್ಟರೇಟ್ ಪ್ರದಾನ ಮಾಡಲಾಯಿತು.

ಶಿಕ್ಷಣಕ್ಷೇತ್ರದಲ್ಲಿವಿದ್ಯಾರ್ಥಿಗಳಿಗೆಮಾರ್ಗದರ್ಶನನೀಡುವುದರ ಜೊತೆಗೆ ಸಮಾಜಮುಖಿ ಚಟುವಟಿಕೆಗಳಲ್ಲಿ ತೊಡಗಿಸಿ ಕೊಂಡಿ ರುವ ಅವರ ಸೇವೆಯನ್ನು ಗುರುತಿಸಿ ಈ ಗೌರವ ನೀಡಲಾಗಿದೆ.ಸಮಾರಂಭದಲ್ಲಿ ಡಾ. ಕೆ.ಎ.ಮನೋಕರನ್,




ಡಾ.ಕೃಷ್ಣಮೂರ್ತಿ ಮಹಾಸ್ವಾಮಿಗಳು, ಮನೋಜ್ ಆರ್, ಡಾ.ರವಿಕುಮಾರ ಎಲ್, ಡಾ.ಕಾಳೇಗೌಡ ಹಾಗೂ ಡಾ.ಸುನೀಲ್ ಪವಾರ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು. ತೌಸೀಫ್ ಕಲ್ಮನಿ ಅವರಿಗೆ ಗೌರವ ಡಾಕ್ಟರೇಟ್ ಲಭಿಸಿರುವ ಹಿನ್ನೆಲೆಯಲ್ಲಿ ಕಾಲೇಜಿನ ಪ್ರಾಂಶುಪಾಲರು, ಪ್ರೌಢಶಾಲೆಯ ಮುಖ್ಯಶಿಕ್ಷಕರು, ಕಾಲೇಜು ಹಾಗೂ ಪ್ರೌಢಶಾಲಾ ವಿಭಾಗದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು, ಹಳೆಯ ವಿದ್ಯಾರ್ಥಿಗಳ ಬಳಗ, ಬ್ಯಾಡಗಿ ಹಾಗೂ ಕೂಬಿಹಾಳ ಗ್ರಾಮದ ಗುರು–ಹಿರಿಯರು ಮತ್ತು ನಾಗರಿಕರು ಅಭಿನಂದನೆ ಸಲ್ಲಿಸಿದ್ದಾರೆ.

## ತಾಲೂಕು ಮಟ್ಟದ ಖೋ-ಖೋ ಪಂದ್ಯಾವಳಿ: ಅಳಲಗೇರಿ ಸರ್ಕಾರಿ ಶಾಲೆಗೆ ಪ್ರಥಮ ಸ್ಥಾನ ಜಿಲ್ಲಾ ಮಟ್ಟದ ಸ್ಪರ್ಧೆಗೆ ಆಯ್ಕೆ

**ಸಮಾಲೋಚನೆ ಸುದ್ದಿ ಬ್ಯಾಡಗಿ**
2026-27ನೇ ಸಾಲಿನ ಬ್ಯಾಡಗಿ ತಾಲೂಕು ಮಟ್ಟದ 14 ವರ್ಷದೊಳಗಿನ ಬಾಲಕರ ಖೋ-ಖೋ ಪಂದ್ಯಾವಳಿಯಲ್ಲಿ ಅಳಲಗೇರಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ತಂಡವು ಅತ್ಯುತ್ತಮ ಪ್ರದರ್ಶನ ನೀಡಿ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದೆ.
ತಾಲೂಕು ಮಟ್ಟದ ಪಂದ್ಯಾವಳಿಯಲ್ಲಿ ಅಳಲಗೇರಿ ಶಾಲೆಯ ಬಾಲಕರು ಸಂಘಟಿತ ಆಟ, ಚುರುಕುತನ ಹಾಗೂ ಉತ್ತಮ ತಂತ್ರಗಾರಿಕೆಯಿಂದ ಗಮನ ಸೆಳೆದರು. ಪಂದ್ಯಾವಳಿಯುದ್ದಕ್ಕೂ ತಂಡವು ಉತ್ತಮ ಪ್ರದರ್ಶನ ನೀಡುವ ಮೂಲಕ ಎದುರಾಳಿ ತಂಡಗಳನ್ನು ಮಣಿಸಿ ಅಂತಿಮವಾಗಿ ಪ್ರಥಮ ಸ್ಥಾನ ಗಳಿಸುವಲ್ಲಿ ಯಶಸ್ವಿಯಾಯಿತು.
ಶಾಲೆಯ ವಿದ್ಯಾರ್ಥಿಗಳ ಈ ಸಾಧನೆಗೆ ಮುಖ್ಯೋಪಾಧ್ಯಾಯರು, ಶಿಕ್ಷಕ ವೃಂದ, ಎಸ್‌ಡಿಎಂಸಿ ಸದಸ್ಯರು, ತರಬೇತುದಾರರು ಹಾಗೂ ಗ್ರಾಮದ ನಾಗರಿಕರು ಸಂತಸ ವ್ಯಕ್ತಪಡಿಸಿ, ಜಿಲ್ಲಾ ಮಟ್ಟದಲ್ಲಿಯೂ ತಂಡ ಉತ್ತಮ ಪ್ರದರ್ಶನ ನೀಡಿ ಯಶಸ್ಸು ಸಾಧಿಸಲಿ ಎಂದು ಶುಭ ಹಾರೈಸಿದ್ದಾರೆ.



## ವಿಕಸಿತ ಗ್ರಾಮ ಪಂಚಾಯತ ಕ್ರಿಯಾ ಯೋಜನೆ ಕಾರ್ಯಾಗಾರಕ್ಕೆ ಚಾಲನೆ

**ಸಮಾಲೋಚನೆ ಸುದ್ದಿ ಬ್ಯಾಡಗಿ**
ಪಟ್ಟಣದ ತಾಪಂ ಸಭಾಭವನದಲ್ಲಿ 27-28ನೇ ಸಾಲಿನ ಕಾರ್ಮಿಕ ಆಯವ್ಯಯ ಹಾಗೂ ಗ್ರಾಮ ಪಂಚಾಯತ್ ಅಭಿವೃದ್ಧಿ ಯೋಜನೆಯ ಸಹಯೋಗದೊಂದಿಗೆ ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜಗಾರ ಅಂಡ್ ಅಜೀವಿಕಾ ಮಿಷನ್ (ಗ್ರಾಮೀಣ) (ವಿಬಿಜಿರಾಮ್‌ಜಿ) ಯೋಜನೆಯಡಿ ವಿಕಸಿತ ಗ್ರಾಮ ಪಂಚಾಯತ ಕ್ರಿಯಾ ಯೋಜನೆ ಸಿದ್ಧಪಡಿಸುವ ಕುರಿತಾದ ಕಾರ್ಯಾ ಗಾರಕ್ಕೆ ತಾಪಂ ಈಒ ಮಲ್ಲಿಕಾರ್ಜುನ ಕೆ.ಎಂ. ಚಾಲನೆ ನೀಡಿದರು.
ಅಕ್ಟೋಬರ್ 2ರಿಂದ ಮಹಾತ್ಮ ಗಾಂಧಿ ಸ್ವಚ್ಛೋತ್ಸವ ಅಭಿಯಾನದ ಅಂಗವಾಗಿ ತಾಲೂಕಿನ ಎಲ್ಲ ಗ್ರಾಮ ಪಂಚಾಯತಿಗಳಲ್ಲಿ ಜನರ ಸಹಭಾಗಿತ್ವದೊಂದಿಗೆ ಕ್ರಿಯಾ ಯೋಜನೆ ಸಿದ್ಧಪಡಿಸುವ ಕುರಿತು ಮಾಹಿತಿ ನೀಡಲಾಯಿತು. ಗ್ರಾಮೀಣ ಕೂಲಿ ಕಾರ್ಮಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು, ಗ್ರಾಮಸಭೆಗಳ ಮೂಲಕ 27, 28ನೇ ಸಾಲಿನಲ್ಲಿ ಕೈಗೊಳ್ಳಬೇಕಾದ ಅಗತ್ಯ ಕಾಮಗಾರಿಗಳು ಹಾಗೂ ಕಾರ್ಮಿಕ ಆಯವ್ಯಯವನ್ನು ಸಿದ್ಧಪಡಿಸಿಕೊಳ್ಳುವಂತೆ ತಿಳಿಸಲಾಯಿತು. ಗ್ರಾಮಸ್ಥರ ಅಗತ್ಯತೆ, ಸ್ಥಳೀಯ ಸಂಪನ್ಮೂಲ ಹಾ ಗೂ ಅಭಿವೃದ್ಧಿ ಆದ್ಯತೆಗಳನ್ನು ಪರಿಗಣಿಸಿ ಯೋಜನೆ ರೂಪಿಸುವ ಕುರಿತು ಕಾರ್ಯಾಗಾರದಲ್ಲಿ ವಿವರಿಸಲಾಯಿತು.
ತಾಪಂ ತಾಂತ್ರಿಕ ಸಂಯೋಜಕ ಸಂತೋಷ್ ನಾಯ್ಕ ಕ್ರಿಯಾ ಯೋಜನೆ ತಯಾರಿಕೆಯ ಪ್ರಕ್ರಿಯೆ ಕುರಿತು ಮಾಹಿತಿ ನೀಡಿದರು. ತಾಪಂ ಸಹಾಯಕ ನಿರ್ದೇಶಕ ಎಂ.ಎ.ಅಗಸರ (ವಿಬಿಜಿರಾಮ್‌ಜಿ) ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಯೋಜನೆಯ ಉದ್ದೇಶ ಹಾಗೂ ಅನುಷ್ಠಾನದ ಕುರಿತು ವಿವರಿಸಿದರು. ತಾಪಂ ಸಹಾಯಕ ನಿರ್ದೇಶಕ ನಾಗರಾಜ್ ಹಡಗಲಿ (ಪಂಚಾಯತ್ ರಾಜ್) ಅವರು ವಿವಿಧ ಚಟುವಟಿಕೆಗಳ ಕುರಿತು ಸವಿಸ್ತಾರವಾಗಿ ಮಾಹಿತಿ ನೀಡಿದರು.
ಕಾರ್ಯಾಗಾರದಲ್ಲಿ ತಾಲೂಕಿನ ಎಲ್ಲ ಗ್ರಾಮ ಪಂಚಾಯತಿಗಳ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಗಣಕಯಂತ್ರ ನಿರ್ವಾ ಹಕರು ಹಾಗೂ ವಿಬಿಜಿರಾಮ್‌ಜಿ ಯೋಜನೆಯ ಸಿಬ್ಬಂದಿ ಉಪಸ್ಥಿತರಿದ್ದರು.






## ಧರಣಿ ಕುಳಿತ ನಾಡದೊರೆ ಡಿಕೆಶಿ

ಬೆಂಗಳೂರು: ಎಸ್‌ಐಆರ್ ಅಕ್ರಮ ಕುರಿತು ಸ್ವತಃ ಕರ್ನಾಟಕ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಬೆಂಗಳೂರಿನ ರಾಜ್ಯ ಮುಖ್ಯ ಚುನಾವಣಾಧಿಕಾರಿ ಕಚೇರಿ ಮುಂದೆ ಪ್ರತಿಭಟನೆ ನಡೆಸುತ್ತಿದ್ದಾರೆ. ರಾಜ್ಯ ಸಚಿವ ಸಂಪುಟವು ಸಿಎಂಗೆ ಸಾಥ್ ನೀಡಿದೆ. ಕಚೇರಿ ಬಾಗಿಲಿಗೆ ಕುಳಿತ ಡಿಕೆ ಶಿವಕುಮಾರ್ ಅವರು "ಫಾರಂ 7 ಮೂಲಕ ಮತದಾರರನ್ನು ಮತದಾರರ ಪಟ್ಟಿಯಿಂದ ಹೊರಗಿಡುವ ಷಡ್ಯಂತ್ರ ನಡೆಯುತ್ತಿದ್ದು, ಪ್ರಕರಣ ದಾಖಲಿಸುವಂತೆ" ಮನವಿ ಮಾಡಿದ್ದಾರೆ.
ಮುಖ್ಯ ಚುನಾವಣಾಧಿಕಾರಿ ಜ್ಞಾನೇಶ್ ಕುಮಾರ್ ಅವರಿಗೆ ಮಾಹಿತಿಯಿಲ್ಲದೇ ಇಂತಹ ಕೃತ್ಯ ನಡೆಯಲು ಸಾಧ್ಯವಿಲ್ಲ. ಎಸ್‌ಐಆರ್ ದೇಶದ ಅತಿ ದೊಡ್ಡ ವಂಚನೆಯಾಗಿದ್ದು, ಎಸ್‌ಐಆರ್ ರದ್ದಾಗಬೇಕು" ಎಂದು ಡಿಕೆ ಶಿವಕುಮಾರ್ ಆಗ್ರಹಿಸಿದರು. ಪ್ರತಿಭಟನೆ ವೇಳೆ ಕೆಪಿಸಿಸಿ ಅಧ್ಯಕ್ಷ ಬಿ ಕೆ ಹರಿಪ್ರಸಾದ್, ಸಚಿವ ಪ್ರಿಯಾಂಕ್ ಖರ್ಗೆ, ಎಸ್ ಎಸ್ ಮಲ್ಲಿಕಾರ್ಜುನ, ಈಶ್ವರ್ ಖಂಡ್ರೆ, ಎಂ ಬಿ ಪಾಟೀಲ್, ಬಿಡಿಎ ಅಧ್ಯಕ್ಷರಾದ ಎನ್ ಎ ಹ್ಯಾರಿಸ್, ವಿಧಾನ ಪರಿಷತ್ ಮಾಜಿ ಸಭಾಪತಿ ವಿ ಆರ್ ಸುದರ್ಶನ್ ಮತ್ತಿತರರು ಉಪಸ್ಥಿತರಿದ್ದರು.
**ಏಕಾಏಕಿ ಪ್ರತಿಭಟನೆಗೆ ಕಾರಣವೇನು?:** ರಾಜ್ಯದಲ್ಲಿ ಕಳೆದ ನಾಲ್ಕು ತಿಂಗಳಿನಿಂದ ಎಸ್‌ಐಆರ್ ಪ್ರಕ್ರಿಯೆ ನಡೆಯುತ್ತಿದೆ. ಈಗಾಗಲೇ ಕರಡು ಮತದಾರರ ಪಟ್ಟಿಯನ್ನು ಬಿಡುಗಡೆ ಮಾಡಿದ್ದು, ಇದರಲ್ಲಿ 1.07 ಕೋಟಿ ಲಕ್ಷ ಮತದಾರರ ಹೆಸರು ಡಿಲೀಟ್ ಮಾಡಲಾಗಿದ್ದು, 43 ಲಕ್ಷ ಮಂದಿಗೆ ನಾನಾ ಕಾರಣಗಳಿಗೆ ನೋಟಿಸ್ ಜಾರಿ ಮಾಡಲಾಗಿದೆ. ಜತೆಗೆ ಫಾರಂ ನಂಬರ್ 7 ರ ಮೂಲಕ ಮತದಾರರ ಹೆಸರು ಡಿಲೀಟ್ ಮಾಡಲು ಅವಕಾಶ ನೀಡಲಾಗಿದೆ. ಸದ್ಯ ಸಚಿವ ಎಂಬಿ ಪಾಟೀಲ್ ಸೇರಿದಂತೆ ಹಲವು ಸಚಿವರು, ಶಾಸಕರ ಮತದಾರರ ಕ್ಷೇತ್ರಗಳಲ್ಲಿ ಪೂರ್ವಮುದ್ರಿತ ಮತದಾರರ ವಿವರಗಳನ್ನು ಒಳಗೊಂಡ ಫಾರಂ 7 ಮೂಲಕ ರಾಜ್ಯದ ಅಲ್ಪಸಂಖ್ಯಾತರು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ಅರ್ಹ ಮತದಾರರನ್ನು ಮತದಾರರ ಪಟ್ಟಿಯಿಂದ ಹೊರಗಿಡಲಾಗುತ್ತಿದೆ ಎಂಬ ಆರೋಪ ಕೇಳಿ ಬಂದಿದೆ. ಹೀಗಾಗಿ, ಸಿಎಂ ಪ್ರತಿಭಟನೆಗಿಳಿದಿದ್ದಾರೆ.
**ಸಚಿವರ ಕ್ಷೇತ್ರಗಳಲ್ಲೇ ಸಾವಿರಾರು ಮತಗಳ ಡಿಲೀಟ್ ಗೆ ಪಿತೂರಿ:** "ಬಬಲೇಶ್ವರದಲ್ಲಿ 1634 ಸಾವಿರಕ್ಕೂ ಅಧಿಕ ಇಂತಹ ಅರ್ಜಿಗಳನ್ನು ಸಲ್ಲಿಸಲಾಗಿದೆ. ಬಿಜಾಪುರದಲ್ಲಿ 14 ಸಾವಿರ ಅರ್ಜಿಗಳನ್ನು ಸಲ್ಲಿಸಲಾಗಿತ್ತು. ಭಾಲ್ಕಿಯಲ್ಲಿ 3244 ಇಂತಹ ಅರ್ಜಿಗಳನ್ನು ಬಿಜೆಪಿ ಕಾರ್ಯಕರ್ತರು ನೀಡಿದ್ದಾರೆ. ಭಾಲ್ಕಿ, ನರಸಿಂಹರಾಜಪುರ, ಬೆಳಗಾವಿ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಅರ್ಹ ಮತದಾರರನ್ನು ಮತದಾರರ ಪಟ್ಟಿಯಿಂದ ತೆಗೆದು ಹಾಕಲು ಫಾರಂ 7 ನೀಡಿರುವುದು ಕಂಡು ಬಂದಿದೆ. ಮತ್ತೆ ಕೆಲವು ಕ್ಷೇತ್ರಗಳಲ್ಲಿ 5-10 ಸಾವಿರ ಮತಗಳನ್ನು ಡಿಲೀಟ್ ಮಾಡುವ ಷಡ್ಯಂತ್ರ ನಡೆದಿದೆ. ಪ್ರಕಾಶ್ ರಾಜ್ ಅವರ ನೇತೃತ್ವದ ಸಿವಿಲ್ ಸೊಸೈಟಿ ಸದಸ್ಯರು ಮತಗಟ್ಟೆಗಳಿಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಿದ್ದಾರೆ" ಎಂದು ಸಿಎಂ ಮಾಹಿತಿ ನೀಡಿದರು.
"ಬಿಜೆಪಿಯ ಅಧಿಕೃತ ಕಾರ್ಯಕರ್ತರು ತಮ್ಮ ಹೆಸರಿನಲ್ಲಿ ನೂರಾರು ಇಂತಹ ಫಾರಂ 7 ಅರ್ಜಿಗಳನ್ನು ಸಲ್ಲಿಸಿರುವುದನ್ನು ನಾವು ಪತ್ತೆ ಹಚ್ಚಿದ್ದೇವೆ. ಕೆಲವು ಕಡೆ ಬಿಜೆಪಿ ಕಾರ್ಯಕರ್ತರು ತಮ್ಮ ತಪ್ಪನ್ನು ಒಪ್ಪಿಕೊಂಡಿದ್ದಾರೆ. ಬಿಜೆಪಿ ಹಾಗೂ ಜನತಾದಳದ ಷಡ್ಯಂತ್ರ ಇದೀಗ ಬಯಲಾಗಿದೆ. ಫಾರಂ 7ರಲ್ಲಿ ಮಾಹಿತಿಯನ್ನು ಮುದ್ರಿಸಿ ಬಿಜೆಪಿ ಕಾರ್ಯಕರ್ತರು ಈ ಕಾರ್ಯದಲ್ಲಿ ತೆ-ಊಡಗಿದ್ದಾರೆ. ಕೆಲವು ಕಡೆ ಈ ಅರ್ಜಿ ನೀಡಿದ್ದ ಬಿಜೆಪಿ ನಾಯಕರು ಹಾಗೂ ಕಾರ್ಯಕರ್ತರು ತಮ್ಮ ತಪ್ಪನ್ನು ಒಪ್ಪಿಕೊಂಡಿದ್ದಾರೆ. ಎಲ್ಲಿ ಈ ಫಾರಂ ಮುದ್ರಿತವಾಗುತ್ತಿದೆ? ಇದರ ಹಿಂದೆ ಯಾವ ಪಕ್ಷದ ನಾಯಕರು ಇದ್ದಾರೆ? ಚುನಾವಣಾ ಆಯೋಗ ಇದರ ಹಿಂದೆ ಇರುವ ಪ್ರತಿಯೊಬ್ಬರನ್ನೂ ಪತ್ತೆ ಹಚ್ಚಿ ಕಠಿಣ ಕಾನೂನು ಕ್ರಮಗಳನ್ನು ಜರುಗಿಸಬೇಕು" ಎಂದು ಒತ್ತಾಯಿಸಿದರು.

### ಚುನಾವಣೆಯಲ್ಲಿ ಗೆಲ್ಲಲು ಸಾಧ್ಯವಿಲ್ಲದೆ ಎಸ್‌ಐಆರ್!

"ಚುನಾವಣೆಯಲ್ಲಿ ಗೆಲ್ಲಲು ಸಾಧ್ಯವಿಲ್ಲ ಎಂಬ ಕಾರಣಕ್ಕಾಗಿ ಬಿಜೆಪಿ ಹಾಗೂ ಜನತಾದಳ ಇಂತಹ ಕ್ರಿಮಿನಲ್ ಷಡ್ಯಂತ್ರ ನಡೆಸುತ್ತಿರುವುದು ಜಗಜ್ಜಾಹೀರಾಗಿದೆ. ಇಡೀ ದೇಶದಲ್ಲಿಯೇ ಇಂತಹ ಕ್ರಿಮಿನಲ್ ಗಳು ಇರಲು ಸಾಧ್ಯವಿಲ್ಲ. ನಾವು ಯಾವುದೇ ಕಾರಣಕ್ಕೂ ಕರ್ನಾಟಕದಲ್ಲಿ ಇಂತಹ ಕ್ರಿಮಿನಲ್ ಕೃತ್ಯಗಳು ನಡೆಯಲು ಬಿಡುವುದಿಲ್ಲ" ಎಂದು ಸಿಎಂ ಹೇಳಿದರು.

## ಅ. 21ರಂದು ವಿಜಯದಶಮಿ ಹಬ್ಬವನ್ನು ಆಚರಿಸಲು ತೀರ್ಮಾನ

**ಸಮಾಲೋಚನೆ ಸುದ್ದಿ ರಾಣೆಬೆನ್ನೂರು**
ನಗರದ ಮೆಡ್ಲೇರಿ ರಸ್ತೆಯ ಶ್ರೀ ಆದಿಶಕ್ತಿ ದೇವಸ್ಥಾನದ ಸಭಾಭವನದಲ್ಲಿ ಗುರುವಾರ ದಸರಾ ಹಬ್ಬ ಆಚರಣೆ ಕುರಿತು ನಗರದ ವಿವಿಧ ಸಮಾಜಗಳ ಸಮಿತಿ ಹಾಗೂ ದೇವಸ್ಥಾನಗಳ ಸಮಿತಿ ಸದಸ್ಯರ ಸಭೆಯಲ್ಲಿ ಅ.21ರಂದು ವಿಜಯದಶಮಿ ಹಬ್ಬವನ್ನು ಆಚರಿಸಲು ತೀರ್ಮಾನಿಸಲಾಯಿತು.
ಸಭೆಯಲ್ಲಿ ಶ್ರೀ ತುಂಗಾಜಲ ಚೌಡೇಶ್ವರಿ ದೇವಸ್ಥಾನ ಸಮಿತಿ ಅಧ್ಯಕ್ಷ ಶೇಖಪ್ಪ ಹೊಸಗೌಡ್ರ ಮಾತನಾಡಿ, ವಿವಿಧ ಪಂಚಾಂಗಗಳಲ್ಲಿ ವ್ಯತ್ಯಾಸ ಉಂಟಾಗಿರುವ ಹಿನ್ನೆಲೆಯಲ್ಲಿ ವಿಜಯದಶಮಿ ಆಚರಣೆ ಕುರಿತು ಜನರಲ್ಲಿ ಗೊಂದಲ ಮೂಡಿದೆ. ರಾಜ್ಯದ ಮೈಸೂರು ದಸರಾ ಅಂಬಾರಿ ಉತ್ಸವ ದಿನದಲ್ಲಿಯೇ ವಿಜಯ ದಶಮಿ ಆಚರಣೆ ಮಾಡಿಕೊಂಡು ಬರಲಾಗುತ್ತಿದೆ. ಅದರಂತೆ ಈ ಬಾರಿಯೂ ಅ.21ರಂದು ಹಬ್ಬ ಆಚರಣೆ ಮಾಡಲಾಗುವುದು. ಈ ನಿಟ್ಟಿನಲ್ಲಿ ನಗರದ ಎಲ್ಲಾ ದೇವಸ್ಥಾನಗಳ ಸಮಿತಿ ಸದಸ್ಯರು ಅ.21ರಂದೇ ಅಚ್ಚುಕಟ್ಟಾಗಿ, ಪಲ್ಲಕ್ಕಿ ಉತ್ಸವ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಆಚರಣೆ ಮಾಡಬೇಕು ಎಂದು ಮನವಿ ಮಾಡಿದರು.
ಕೃಷ್ಣಾಸ ಪವಾರ ಮಾತನಾಡಿ, ನಗರದ ದೊಡ್ಡಪೇಟೆ ಅಂಭಾಭವಾನಿ ದೇವಸ್ಥಾನದಲ್ಲಿ ಕೊಲ್ಲಾಪುರ ಮಹಾಲಕ್ಷ್ಮೀ ದೇವಿ ದೇವಸ್ಥಾನದಲ್ಲಿ ಸೂಚನೆ ಮೇರೆಗೆ ಅ.20ರಂದು ಆಚರಣೆ ಮಾಡಲಾಗುತ್ತಿದೆ. ಆದರೇ ಈ ಬಾರಿ ಎರಡು ದಿನ ಬಂದಿದ್ದರಿಂದ ಜನರಲ್ಲಿ ಗೊಂದಲ ಮೂಡಿದೆ. ನಾವು ಅ.21ರಂದು ಹಬ್ಬ ಆಚರಿಸಲು ಸಮಾಜದ ಜನರಿಗೆ ತಿಳಿಸಲಾಗುವುದು ಎಂದರು.



ನಾಗರಾಜ ಮಾಕನೂರ ಹಾಗೂ ಪೂರ್ಣಚಂದ್ರ ಗುಪ್ತಾ ಮಾತನಾಡಿ, ವಿಜಯದಶಮಿ ಹಬ್ಬವನ್ನು ಈ ಬಾರಿ ಬಹುವೈಭವದಿಂದ ಆಚರಿಸಲು ನಿರ್ಧರಿಸಲಾಗಿದೆ. ರಾಜ್ಯದ ಮೈಸೂರು ದಸರಾ ಮಾದರಿಯಲ್ಲಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಿ, ಹಿಂದೂ ಸಂಸ್ಕೃತಿ ಹಾಗೂ ಸಂಪ್ರದಾಯದಂತೆ ಹಬ್ಬ ಆಚರಿಸಲು ಎಲ್ಲರೂ ಸಹಕಾರ ನೀಡಬೇಕು ಎಂದರು.
ಪ್ರವೀಣ ಕೋರ್ಪಡೆ ಮಾತನಾಡಿ, ನಗರದ ದೇವಸ್ಥಾನಗಳ ಸ್ವಚ್ಛತೆ ಕುರಿತು ನಗರಸಭೆ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು. ಸ್ವಚ್ಛತೆ ವಿಷಯದಲ್ಲಿ ನಿರ್ಲಕ್ಷ್ಯ ವಹಿಸದೆ, ಹಬ್ಬದ ಹಿನ್ನೆಲೆಯಲ್ಲಿ ಎಲ್ಲ ದೇವಸ್ಥಾನಗಳ ಸುತ್ತಮುತ್ತಲೂ ಸ್ವಚ್ಛತೆ ಕಾಪಾಡಬೇಕು ಎಂದು ಒತ್ತಾಯಿಸಿದರು.
ಎಲ್ಲ ದೇವಸ್ಥಾನಗಳ ಸದಸ್ಯರು ಒಗ್ಗೂಡಿ ಹಬ್ಬಗಳ ಆಚರಣೆ, ಧಾರ್ಮಿಕ ಜಾಗೃತಿ ಹಾಗೂ ಸ್ವಚ್ಛತಾ ಕಾರ್ಯಗಳಿಗೆ ಆದ್ಯತೆ ನೀಡಬೇಕು ಎಂದು ಸಭೆಯಲ್ಲಿ ಕರೆ ನೀಡಲಾಯಿತು.
ಡಾ.ಸಂಜಯ ನಾಯ್ಕ, ರಮೇಶ ಗುತ್ತಲ, ಕೃಷ್ಣ ಕನಕೇರಿ, ನಾಗರಾಜ ರಾಯಚೂರು, ಸಂಕಪ್ಪ ಪೂಜಾರ, ಆಂಜನೇಯ ಬಾಳಿಕಾಯಿ, ಮಂಜು ಗರಗ, ನಾಗರಾಜ ಗೌಡರ, ಅಶೋಕ ಗುಳೇದ ಮತ್ತಿತರರಿದ್ದರು.

## ಹಾವೇರಿ ಜಿಲ್ಲಾಡಳಿತಕ್ಕೆ ಹೈಕೋರ್ಟ್ ಶಾಕ್!

### ಅಭಿನವ ಹಾಲಶ್ರೀಗೆ ಜಿಲ್ಲೆ ಪ್ರವೇಶ ನಿರ್ಬಂಧಕ್ಕೆ ತಡೆಯಾಜ್ಞೆ
### । ಹಾನಗಲ್ ಗಣಪತಿ ವಿಸರ್ಜನೆ ಶೋಭಾಯಾತ್ರೆಯಲ್ಲಿ ಭಾಗವಹಿಸಲು ಸ್ವಾಮೀಜಿ ಕರೆ

**ಸಮಾಲೋಚನೆ ಸುದ್ದಿ ಹಾವೇರಿ**
ಹಾವೇರಿ ಜಿಲ್ಲಾಡಳಿತವು ವಿಜಯನಗರ ಜಿಲ್ಲೆಯ ಹೀರೆಹಡಗಲಿ ಹಾಲಸ್ವಾಮಿ ಮಠದ ಅಭಿನವ ಹಾಲಶ್ರೀಗಳಿಗೆ ಜಿಲ್ಲೆಗೆ ಪ್ರವೇಶಿಸದಂತೆ ವಿಧಿಸಿದ್ದ ನಿರ್ಬಂಧಕ್ಕೆ ಹೈಕೋರ್ಟ್ ತಡೆಯಾಜ್ಞೆ ನೀಡಿದೆ ಎಂದು ತಿಳಿದುಬಂದಿದೆ.
ಹಾನಗಲ್ ಪಟ್ಟಣದಲ್ಲಿ ನಡೆಯಲಿರುವ ವಿರಾಟ್ ಹಿಂದೂ ಗಣಪತಿ ವಿಸರ್ಜನೆ ಕಾರ್ಯಕ್ರಮದಲ್ಲಿ ಅಭಿನವ ಹಾಲಶ್ರೀಗಳು ಭಾಗವಹಿಸಲಿದ್ದಾರೆ ಎನ್ನಲಾಗಿದ್ದು, ಜಿಲ್ಲೆಯಲ್ಲಿ ಕೋಮು ಸೌಹಾರ್ದತೆಗೆ ಧಕ್ಕೆ ಉಂಟಾಗುವ ಸಾಧ್ಯತೆ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ನಿರ್ಬಂಧ ವಿಧಿಸಿತ್ತು. ಈ ಆದೇಶವನ್ನು ಪ್ರಶ್ನಿಸಿ ಸಲ್ಲಿಸಲಾಗಿದ್ದ ಅರ್ಜಿಯ ವಿಚಾರಣೆ ನಡೆಸಿದ ಹೈಕೋರ್ಟ್, ನಿರ್ಬಂಧಕ್ಕೆ ತಡೆಯಾಜ್ಞೆ ನೀಡಿದೆ. ಅಭಿನವ ಹಾಲಶ್ರೀಗಳು ಈ ಹಿಂದೆ ಚೈತ್ರಾ ಕುಂದಾಪುರ ವಂಚನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬಂಧನಕ್ಕೊಳಗಾಗಿದ್ದರು. ಧಾರ್ಮಿಕ ಪ್ರವಚನ ಹಾಗೂ ಧರ್ಮ ಪ್ರಚಾರದ ಮೂಲಕವೂ ಅವರು ಸಾರ್ವಜನಿಕವಾಗಿ ಗುರುತಿಸಿಕೊಂಡಿದ್ದಾರೆ.



ಇದೀಗ ಹೈಕೋರ್ಟ್ ಆದೇಶದ ಹಿನ್ನೆಲೆಯಲ್ಲಿ ಸಾಮಾಜಿಕ ಜಾಲತಾಣದಲ್ಲಿ ವಿಡಿಯೋ ಹೇಳಿಕೆ ನೀಡಿರುವ ಅಭಿನವ ಹಾಲಶ್ರೀಗಳು, ಗಣೇಶ ವಿಸರ್ಜನೆ ದಿನದಂದು ಸಂತರು ಹಾಗೂ ಸ್ವಾಮೀಜಿಗಳನ್ನು ಒಗ್ಗೂಡಿಸಿ ಹಾನಗಲ್‌ನಲ್ಲಿ ಅದ್ದೂರಿ ಶೋಭಾಯಾತ್ರೆ ನಡೆಸಲು ಕರೆ ನೀಡಿದ್ದಾರೆ. "ಎಲ್ಲರೂ ಹಾನಗಲ್‌ಗೆ ಆಗಮಿಸಿ ಗಣೇಶ ಶೋಭಾಯಾತ್ರೆಯಲ್ಲಿ ಭಾಗವಹಿಸೋಣ" ಎಂದು ಅವರು ಮನವಿ ಮಾಡಿದ್ದಾರೆ.

## ಪ್ರವಾಸೋದ್ಯಮದ ಅಭಿವೃದ್ಧಿಯಲ್ಲಿ ತಂತ್ರಜ್ಞಾನದ ಪಾತ್ರ ಪ್ರಮುಖವಾದುದು: ಶ್ರೀನಿವಾಸರಾವ್

ಧಾರವಾಡ: ಪ್ರವಾಸೋದ್ಯಮದ ಅಭಿವೃದ್ಧಿಯಲ್ಲಿ ತಂತ್ರಜ್ಞಾನವು ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ಪುಣೆಯ ಟೆಲ್‌ಮಿ ಡಿಜಿಇನ್ಫೋಟೆಕ್ ಸಂಸ್ಥೆಯ ಸಿಇಓ ವಿ.ಶ್ರೀನಿವಾಸರಾವ್ ಹೇಳಿದರು.
ಅವರು ಕರ್ನಾಟಕ ಕಾಲೇಜಿನ ಪ್ರವಾಸೋದ್ಯಮ ಅಧ್ಯಯನ ವಿಭಾಗದ ಭುವನ ವಿಜಯ ಸಭಾಂಗಣದಲ್ಲಿ ಆಯೋಜಿಸಿದ ವಿಶ್ವ ಪ್ರವಾಸೋದ್ಯಮ ದಿನಾಚರಣೆಯ ಅಂಗವಾಗಿ
'ಪ್ರವಾಸೋದ್ಯಮವನ್ನು ಪುನರ್ ವಿನ್ಯಾಸಗೊಳಿಸುವಲ್ಲಿ ಎಐ ಮತ್ತು ಡಿಜಿಟಲ್ ತಂತ್ರಜ್ಞಾನದ ಪ್ರಭಾವ', ಎಂಬ ವಿಷಯದ ಕುರಿತು
ಮಾತನಾಡಿದರು.
ಪ್ರಸ್ತುತ ಇಂಟರ್ನೆಟ್, ಮೊಬೈಲ್ ಅಪ್ಲಿಕೇಶನ್, ಡಿಜಿಟಲ್ ತಂತ್ರಜ್ಞಾನ, ಜಿಪಿಎಸ್ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ ಮತ್ತು ಸಾಮಾಜಿಕ ಮಾಧ್ಯಮಗಳ ಬಳಕೆಯಿಂದ ಪ್ರವಾಸೋದ್ಯಮ ಕ್ಷೇತ್ರವನ್ನು ಸುಲಭವಾಗಿ ಅಭಿವೃದ್ಧಿಪಡಿಸಲು ಸಾಧ್ಯ. ಪ್ರವಾಸೋದ್ಯಮವು ದೇಶದ ಆರ್ಥಿಕ, ಸಾಮಾಜಿಕ ಮತ್ತು ಸಾಂಸ್ಕೃತಿಕ




ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಭಾರತವು ನೈಸರ್ಗಿಕ ಸೌಂದರ್ಯ, ಐತಿಹಾಸಿಕ ಸ್ಮಾರಕಗಳು, ಧಾರ್ಮಿಕ ಕೇಂದ್ರಗಳು, ವನ್ಯಜೀವಿ ಮತ್ತು ವೈವಿಧ್ಯಮಯ ಸಂಸ್ಕೃತಿಯನ್ನು ಹೊಂದಿರುವುದರಿಂದ ಪ್ರವಾಸೋದ್ಯಮ ಕ್ಷೇತ್ರದಲ್ಲಿ ಅಪಾರ ಅವಕಾಶಗಳನ್ನು ಹೊಂದಿದೆ. ಆದರೆ ಈ ಕ್ಷೇತ್ರವು ಹಲವು ಸವಾಲುಗಳನ್ನು ಕೂಡ ಎದುರಿಸುತ್ತಿದೆ ಎಂದರು.
ತಂತ್ರಜ್ಞಾನವು ಪ್ರವಾಸೋದ್ಯಮವನ್ನು ಹೆಚ್ಚು ಸುಲಭ, ವೇಗವಾದ, ಸುರಕ್ಷಿತ ಮತ್ತು ಪರಿಣಾಮಕಾರಿ ಮಾಡಿದೆ.
ಭವಿಷ್ಯದಲ್ಲಿ ಎಐ, ವರ್ಚುವಲ್ ರಿಯಾಲಿಟಿ ಮತ್ತು ಸ್ಮಾರ್ಟ್ ಪ್ರವಾಸೋದ್ಯಮದ ಬೆಳವಣಿಗೆಯಿಂದ ಪ್ರವಾಸಿಗರ ಅನುಭವ ಇನ್ನಷ್ಟು ಉತ್ತಮವಾಗುವ ಸಾಧ್ಯತೆಯಿದೆ ಎಂದರು.
ಕರ್ನಾಟಕ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ರಾಬರ್ಟ್ ದದ್ದಾಪುರಿ ಮಾತನಾಡಿ ಪ್ರವಾಸೋದ್ಯಮ ಕ್ಷೇತ್ರ ದಿನದಿಂದ ದಿನಕ್ಕೆ ಬದಲಾಗುತ್ತಿದೆ. ಆದ್ದರಿಂದ ಜೀವನದಲ್ಲಿ ಎದುರಾಗುವ ಪ್ರತಿಯೊಂದು ಪರಿಸ್ಥಿತಿಯ ಬಗ್ಗೆ ಅರಿವು ಹೊಂದಿರಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.
ಪ್ರವಾಸೋದ್ಯಮ ಅಧ್ಯಯನ ವಿಭಾಗದ ಮುಖ್ಯಸ್ಥ ಡಾ. ಜಗದೀಶ ಕಿವುಡನವರ ಮಾತನಾಡಿ ಪ್ರವಾಸೋದ್ಯಮ ಅಧ್ಯಯನ ವಿಭಾಗದಿಂದ ವಿದ್ಯಾರ್ಥಿಗಳಿಗೆ ಉದ್ಯಮ ಆಧಾರಿತ ತರಬೇತಿ, ಇಂಟರ್ನಶಿಫ್, ಕಾರ್ಯಗಾರ, ಉದ್ಯಮ ಪರಿಣಿತರಿಂದ ವಿಶೇಷ ಉಪನ್ಯಾಸಗಳನ್ನು ಆಯೋಜಿಸಲಾಗುತ್ತದೆ ಎಂದರು.
ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಕಲಾ ಕಾಲೇಜಿನ ಪ್ರಾಚಾರ್ಯರಾದ ಡಾ. ಐ. ಸಿ. ಮುಳಗುಂದ ಮಾತನಾಡಿ ಪ್ರವಾಸೋದ್ಯಮವು ಸಾಮಾಜಿಕ, ಸಾಂಸ್ಕೃತಿಕ ಮತ್ತು ರಾಜಕೀಯ ಮೌಲ್ಯಗಳನ್ನು ಸಂರಕ್ಷಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಪ್ರವಾಸೋದ್ಯಮದ ಮೂಲಕ ವಿವಿಧ ದೇಶಗಳ ಜನರು ಪರಸ್ಪರ ಸಂಸ್ಕೃತಿ, ಪರಂಪರೆ ಮತ್ತು ಜೀವನಶೈಲಿಯನ್ನು ತಿಳಿದುಕೊಳ್ಳುತ್ತಾರೆ. ಇದರಿಂದ ಸಾಂಸ್ಕೃತಿಕ ವಿನಿಮಯ ಮತ್ತು ರಾಷ್ಟ್ರೀಯ ಏಕತೆ ಹೆಚ್ಚುತ್ತದೆ. ವಿಶ್ವದಾದ್ಯಂತ 1,200ಕ್ಕೂ ಹೆಚ್ಚು ಯುನೆಸ್ಕೋ ಮಾನ್ಯತೆ ಪಡೆದ ವಿಶ್ವ ಪರಂಪರೆಯ ತಾಣಗಳು ಇವೆ. ಭಾರತದಲ್ಲಿ 44 ಯುನೆಸ್ಕೋ ವಿಶ್ವ ಪರಂಪರೆಯ ತಾಣಗಳು ಇವೆ ಎಂದರು.
**ಡಿಜಿಟಲ್ ಲ್ಯಾಬ್ ಉದ್ಘಾಟನೆ:** ಈ ಸಂದರ್ಭದಲ್ಲಿ ವಿಭಾಗದಲ್ಲಿ ಯರಾಸ್ಮಸ್ ಸಂಶೋಧನಾ ನಿಧಿಯಿಂದ ನಿರ್ಮಿಸಲಾದ ಹವಾನಿಯಂತ್ರಿತ ಡಿಜಿಟಲ್ ವರ್ಚುವಲ್
ಗ್ರಂಥಾಲಯವನ್ನು ಉದ್ಘಾಟಿಸಲಾಯಿತು. ವಿದ್ಯಾರ್ಥಿಗಳಿಗಾಗಿ ವಿಶ್ವಪ್ರವಾಸೋದ್ಯಮ ದಿನಾಚರಣೆ-ಯ ಅಂಗವಾಗಿ ಆಯೋಜಿಸಿದ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ
ಬಹುಮಾನ ವಿತರಿಸಲಾಯಿತು.
ಕಾರ್ಯಕ್ರಮದಲ್ಲಿ ಕರ್ನಾಟಕ ವಿಶ್ವವಿದ್ಯಾಲಯದ ಮಾಜಿ ಕುಲಸಚಿವರಾದ ಪ್ರೊ. ಎಸ್. ರಾಜಶೇಖರ, ಡಾ.ಸುಷ್ಮಾ ಮಳಗಿ, ಡಾ.ರಾಣಿ ರವಿಶಂಕರ, ಡಾ.ಕೇದಾರ ಅಂಗಡಿ, ಡಾ. ಸಂದೀಪ ಸೇರಿದಂತೆ ವಿದ್ಯಾರ್ಥಿಗಳು ಹಾಜರಿದ್ದರು.

ಸಮಾಲೋಚನೆ ಸುದ್ದಿ
SAMALOCHANE RANEBENNURSUDDI
Kannada Daily Morning

# ನೈಸರ್ಗಿಕ ಕೃಷಿ ಉತ್ಪನ್ನಗಳ ಸಂಚಾರಿ ಮಾರಾಟ 'ಸುರಭಿ' ಮಳಿಗೆಗೆ ಡಿಸಿ ಚಾಲನೆ

**ಗದಗ:** ಗೋ ಜೈವಿಕ ಕೃಷಿ ಸಂಸ್ಥೆಯ ಉತ್ಪನ್ನಗಳ ಸಂಚಾರಿ ಮಾರಾಟ ಮಳಿಗೆ 'ಸುರಭಿ'ಗೆ ಗದಗ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ ಮಂಗಳವಾರ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಪ್ರಾಂಗಣದಲ್ಲಿ ಸಾಂಕೇತಿಕವಾಗಿ ಚಾಲನೆ ನೀಡಿದರು.

ಕೇಂದ್ರ ಸರ್ಕಾರ ಯೋಜನೆಯ ರಾಷ್ಟ್ರೀಯ ನೈಸರ್ಗಿಕ ಕೃಷಿ ಅಭಿಯಾನದಡಿ ನೈಸರ್ಗಿಕ ಕೃಷಿಗೆ, ನೈಸರ್ಗಿಕ ಕೃಷಿ ಶಿಕ್ಷಣಕ್ಕೆ ಉತ್ತೇಜನ ನೀಡಲಾಗುತ್ತಿದೆ. ಯಾವುದೇ ರಾಸಾಯನಿಕ ಬಳಸದೇ ನೈಸರ್ಗಿಕವಾಗಿ ಉತ್ಪಾದಿಸಿದ ಉತ್ಪನ್ನಗಳು ಸಾರ್ವಜನಿಕರಿಗೆ ತಲುಪುವಂತಾಗಲಿ ಎಂದು ಜಿಲ್ಲಾಧಿಕಾರಿಗಳು ಶುಭ ಹಾರೈಸಿದರು.

ಗದುಗಿನ ಪ್ರಗತಿಪರ ರೈತ ಗೋ ಜೈವಿಕ ಕೃಷಿ ಸಂಸ್ಥೆಯ ಸಂಚಾಲಕ ರವಿ ಹಡಪದ ಅವರು ಸ್ವತಂತ್ರವಾಗಿ ಸಿದ್ಧಪಡಿಸಿಕೊಂಡ ಈ ಸಂಚಾರಿ ಮಾರಾಟ ಮಳಿಗೆ 'ಸುರಭಿ'ಯಲ್ಲಿ ನೈಸರ್ಗಿಕ ಕೃಷಿಯಿಂದ ಉತ್ಪನ್ನಗೊಂಡ ಗೃಹ ಬಳಕೆಯ ಸಾಮಗ್ರಿಗಳನ್ನು ಸಾರ್ವಜನಿಕರಿಗೆ ಮಾರಾಟ ಮಾಡುವ ವ್ಯವಸ್ಥೆ ಕಲ್ಪಿಸಲಾಗಿದೆ.

ಗದಗ ಜಿಲ್ಲೆಯಲ್ಲಿ 9 ಕ್ಷೇತ್ರ ಸಂಪನ್ಮೂಲ ಕೇಂದ್ರ (ಬಿ.ಆರ್.ಸಿ) ಕಾರ್ಯನಿರ್ವಹಿಸಲಿದ್ದು ನೈಸರ್ಗಿಕ ಕೃಷಿ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ. ನೈಸರ್ಗಿಕ ಕೃಷಿ ಶಿಕ್ಷಣಕ್ಕೆ ಉತ್ತೇತನ ನೀಡಲು ಸರ್ಕಾರ ಮುಂದಾಗಿದೆ.

ಕಾರ್ಯಕ್ರಮದಲ್ಲಿ ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ಶ್ರೀಮತಿ ಚೇತನಾ ಪಾಟೀಲ, ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ಪಿ.ಜಿ.ಚಿದಾನಂದ, ಪಶುಸಂಗೋಪನೆ ಇಲಾಖೆಯ ಜಂಟಿ ನಿರ್ದೇಶಕ ಡಾ.ಎಚ್.ಬಿ.ಹುಲಗಣ್ಣವರ, ಹುಲಕೋಟಿ ಕೃಷಿ ವಿಜ್ಞಾನ ಕೇಂದ್ರದ ವ್ಯವಸ್ಥಾಪಕ ನಾರಾಯಣ ಬಂಡಿ, ಕೃಷಿ ವಿಜ್ಞಾನಿ ವಿನಾಯಕ, ಪುಟ್ಟರಾಜ ಸಾವಯವ ಕೃಷಿ ಪರಿವಾರದ ಸಂಚಾಲಕ ಎಫ್.ಎಸ್.ಪಾಟೀಲ, ನಿರ್ದೇಶಕ ರುದ್ರಯ್ಯ ಹಿರೇಮಠ, ಗೋ ಜೈವಿಕ ಕೃಷಿ ಅನುಸಂಧಾನ ಕೇಂದ್ರ ಟ್ರಸ್ಟ್ ಉಪಾಧ್ಯಕ್ಷ ಗುರಪ್ಪ ತಿರ್ಲಾಪೂರ ಹಾಗೂ ಮಾರುಕಟ್ಟೆ ತಂಡದ ಸದಸ್ಯರು ಪಾಲ್ಗೊಂಡಿದ್ದರು.




# ನದಿ ನೀರು ತುಂಬಿಸಲು ಸರ್ವರೂ ಸಹಕರಿಸಿ: ಶಾಸಕ ಬಿ.ಪಿ. ಹರೀಶ್

**ಹರಿಹರ:** ಕೆರೆಗಳು ಗ್ರಾಮಗಳ ಜೀವನಾಡಿಗಳಾಗಿದ್ದು, ಹೂಳು ತುಂಬಿಕೊಂಡಿರುವುದರಿಂದ ಮಳೆಗಾಲದ ನೀರು ದೀರ್ಘಕಾಲ ಸಂಗ್ರಹವಾಗುತ್ತಿಲ್ಲ. ಹೀಗಾಗಿ ತಾಲೂಕಿನ ಕೆರೆಗಳಿಗೆ ತುಂಗಭದ್ರಾ ನದಿಯಿಂದ ನೀರು ತುಂಬಿಸಲು ಸರ್ಕಾರದ ಮೇಲೆ ಒತ್ತಡ ಹೇರಲಾಗುವುದು ಎಂದು ಶಾಸಕ ಬಿ.ಪಿ. ಹರೀಶ್ ಹೇಳಿದರು.

ಹನಗವಾಡಿ ಗ್ರಾಮದ ವೀರಭದ್ರೇಶ್ವರ ದೇವಸ್ಥಾನದ ಸಭಾಂಗಣದಲ್ಲಿ ಗುರುವಾರ ನಡೆದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು. ಕೊಂಡಜ್ಜಿ, ದೇವರಬೆಳಕೆರೆ, ಕೊಮಾರನಹಳ್ಳಿ, ಯಲವಟ್ಟಿ, ಹೊಳೆಸಿರಿಗೆರೆ ಹಾಗೂ ಹರಿಹರ ನಗರದ ಅಗಸನಕಟ್ಟೆ ಕೆರೆಗಳಿಗೆ ನದಿ ನೀರು ತುಂಬಿಸುವ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಕೆರೆಗಳನ್ನು ತುಂಬಿಸುವುದರಿಂದ ಬೇಸಿಗೆಯಲ್ಲಿ ಜಾನುವಾರು, ಪಕ್ಷಿ, ಪ್ರಾಣಿ ಹಾಗೂ ಜಲಚರಗಳಿಗೆ ನೀರು ಲಭ್ಯವಾಗುವುದರ ಜೊತೆಗೆ ಸುತ್ತಮುತ್ತಲಿನ ಪ್ರದೇಶಗಳ ಅಂತರ್ಜಲ ಮಟ್ಟವೂ ಹೆಚ್ಚಲಿದೆ. ಇದರಿಂದ ರೈತರ ಕೃಷಿ ಚಟುವಟಿಕೆ ಹಾಗೂ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಸಹಕಾರಿಯಾಗಲಿದೆ. ಆದ್ದರಿಂದ ರೈತರು ಹಾಗೂ ಸಾರ್ವಜನಿಕರು ಈ ಕಾರ್ಯಕ್ಕೆ ಸಹಕರಿಸಬೇಕು ಎಂದು ಶಾಸಕರು ಮನವಿ ಮಾಡಿದರು.

ಜಿಪಂ ಮಾಜಿ ಅಧ್ಯಕ್ಷ ಹನಗವಾಡಿ ವೀರೇಶ್ ಮಾತನಾಡಿ, ನದಿಯಿಂದ ಕೆರೆಗಳಿಗೆ ನೀರು ತುಂಬಿಸುವ ಶಾಸಕರ ಪ್ರಯತ್ನ ಸ್ವಾಗತಾರ್ಹವಾಗಿದ್ದು, ರೈತರು ಹಾಗೂ ಸಾರ್ವಜನಿಕರು ಸಹಕರಿಸಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ರೈತ ಮೋರ್ಚಾ ಅಧ್ಯಕ್ಷ ಚಂದ್ರಶೇಖರ ಪೂಜಾರ್, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಡಿ.ಕುಮಾರ್ ಸೇರಿದಂತೆ ವಿವಿಧ ಗ್ರಾಮಗಳ ರೈತ ಮುಖಂಡರು ಹಾಗೂ ರೈತರು ಉಪಸ್ಥಿತರಿದ್ದರು.



# ಕಾಳಿಕಾಂಭ ದೇವಸ್ಥಾನ ಗೋಪುರ ನಿರ್ಮಾಣಕ್ಕೆ ಧರ್ಮಸ್ಥಳ ಯೋಜನೆಯಿಂದ ಒಂದು ಲಕ್ಷ ನೆರವು

**ಸಮಾಲೋಚನೆ ಸುದ್ದಿ ಹರಿಹರ**

ತಾಲೂಕಿನ ಲಕ್ಕಶೆಟ್ಟಿಹಳ್ಳಿ ಗ್ರಾಮದೇವತೆ ಶ್ರೀ ಕಾಳಿಕಾಂಭ ದೇವಸ್ಥಾನದ ಗೋಪುರ ನಿರ್ಮಾಣಕ್ಕೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ 1 ಲಕ್ಷ ಆರ್ಥಿಕ ನೆರವು ನೀಡಲಾಗಿದೆ.

ಗೋಪುರ ನಿರ್ಮಾಣಕ್ಕಾಗಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸಂಸ್ಥಾಪಕರಾದ ಪೂಜ್ಯ ಡಾ. ವೀರೇಂದ್ರ ಹೆಗ್ಗಡೆ ಅವರು ಮಂಜೂರು ಮಾಡಿರುವ 1 ಲಕ್ಷ ಮೊತ್ತದ ಚೆಕ್‌ನ್ನು ದೇವಸ್ಥಾನ ಸಮಿತಿ ಅಧ್ಯಕ್ಷ ಎಂ.ಜಿ.ಬಸವರಾಜಪ್ಪ ಬುಧವಾರ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಗ್ರಾಮೀಣ ಪ್ರದೇಶದ ಮಹಿಳೆಯರು, ಬಡವರು, ಕೂಲಿಕಾರ್ಮಿಕರು, ಸಣ್ಣ ವ್ಯಾಪಾರಸ್ಥರು ಹಾಗೂ ರೈತರ ಆರ್ಥಿಕಾಭಿವೃದ್ಧಿಗೆ ಸಹಕಾರಿಯಾಗಿದೆ ಎಂದರು.



ಮಲೆಬೆನ್ನೂರು ವಿಭಾಗದ ಯೋಜನಾಧಿಕಾರಿ ಕೃಷ್ಣಪ್ಪ ಬೆಳವಣಿಕಿ ಮಾತನಾಡಿ, ಧರ್ಮಸ್ಥಳ ಯೋಜನೆಯು ನಗರ ಹಾಗೂ ಗ್ರಾಮೀಣ ಪ್ರದೇಶದ ಎಲ್ಲ ವರ್ಗದವರ ಆರ್ಥಿಕಾಭಿವೃದ್ಧಿಗೆ ಸೇವೆ ಸಲ್ಲಿಸುತ್ತಿದ್ದು, ಕೆರೆ, ಕಟ್ಟೆ, ದೇವಸ್ಥಾನ ಹಾಗೂ ಗುಡಿಗೋಪುರಗಳ ನಿರ್ಮಾಣಕ್ಕೂ ಆರ್ಥಿಕ ನೆರವು ನೀಡುತ್ತಿದೆ ಎಂದರು.

ಜಿಲ್ಲಾ ಜನಜಾಗೃತಿ ವೇದಿಕೆ ಉಪಾಧ್ಯಕ್ಷ ಜಿ. ಮಂಜುನಾಥ್ ಪಟೇಲ್, ಸದಸ್ಯ ಜಿಗಳಿ ಪ್ರಕಾಶ್, ಎಲ್. ಎನ್. ನಾಗರಾಜ್ ಸೇರಿದಂತೆ ದೇವಸ್ಥಾನ ಸಮಿತಿ ಸದಸ್ಯರು, ಒಕ್ಕೂಟದ ಅಧ್ಯಕ್ಷೆ ಕರಿಬಸಮ್ಮ, ಮೇಲ್ವಿಚಾರಕ ಮನೋಹರ್, ಸೇವಾ ಪ್ರತಿನಿಧಿ ಲತಾ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಮಹಾತ್ಮಗಾಂಧಿ ಸುಧಾರಣೋತ್ಸವ ಅಭಿಯಾನ

## 2027-28ನೇ ಸಾಲಿನ ಕಾರ್ಮಿಕ ಆಯವ್ಯಯ ಸಿದ್ಧತೆ | ಯುಕ್ತಧಾರದ ಮೂಲಕ ಕಾಮಗಾರಿ ಸೇರ್ಪಡೆ

**ಗದಗ:** ವಿಕಸಿತ ಭಾರತ – ಗ್ಯಾರಂಟಿ ಫಾರ್ ರೋಜ್ಗಾರ್ ಅಂಡ್ ಆಜೀವಿಕ ಮಿಷನ್ (ಗ್ರಾಮೀಣ) ಯೋಜನೆಯಡಿ ಅಕ್ಟೋಬರ್ 02 ರಿಂದ "ಮಹಾತ್ಮಗಾಂಧಿ ಸುಧಾರಣೋತ್ಸವ" ಅಭಿಯಾನವನ್ನು ಹಮ್ಮಿಕೊಳ್ಳಲು ತಾಲೂಕಿನ ವ್ಯಾಪ್ತಿಯ ಗ್ರಾಮ ಪಂಚಾಯತಿಗಳಲ್ಲಿ ಅಗತ್ಯ ಸಿದ್ದತೆ ಕೈಗೊಳ್ಳುವಂತೆ ಎಂದು ಡಾ. ಎಚ್.ಎಸ್. ಜನಗಿ ಅವರು ಹೇಳಿದರು.

ತಾಲೂಕು ಪಂಚಾಯತಿ ಸಭಾ ಭವನದಲ್ಲಿ ಹಮ್ಮಿಕೊಂಡ ತರಬೇತಿ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಕೇಂದ್ರಗ್ರಾಮೀಣಾಭಿವೃದ್ಧಿ ಮಂತ್ರಾಲಯ ಸೂಚನೆಯಂತೆ ರಾಜ್ಯ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯವು ಆದೇಶ ಮಾಡಿದ್ದು. ಗ್ರಾಮೀಣ ಜನರಿಗೆ ಸರ್ಕಾರಿ ಸೇವೆಗಳು ಹಾಗೂ ಸವಲತ್ತುಗಳು ಸುಲಭವಾಗಿ ಲಭ್ಯವಾಗುವಂತೆ ಮಾಡಲು ಕೇಂದ್ರ ಸರ್ಕಾರವು ಹಲವು ಪ್ರಮುಖ ಸುಧಾರಣೆಗಳು ಮತ್ತು ಕಾರ್ಯಕ್ರಮಗಳನ್ನು ಜಾರಿಗೆತರಲು ನಿರ್ಧರಿಸಿದೆ. ಗ್ರಾಮೀಣ ಪ್ರದೇಶದಲ್ಲಿ ವ್ಯಾಪಕ ಜನಜಾಗೃತಿ ಮೂಡಿಸಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಗ್ರಾಮಸಭೆಗಳಲ್ಲಿ ಸಕ್ರಿಯವಾಗಿ ಭಾಗವಹಿಸುವಂತೆ ಪ್ರೇರೇಪಿಸಲು ಹಾಗೂ ಸರ್ಕಾರದ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ, "ಜನರ ಯೋಜನೆ ಅಭಿಯಾನ"ದ ಅಂಗವಾಗಿ "ಮಹಾತ್ಮಗಾಂಧಿ ಸುಧಾರಣೋತ್ಸವ" ವನ್ನು ಹಮ್ಮಿಕೊಳ್ಳಲು ತೀರ್ಮಾನಿಸಲಾಗಿದೆ.

ವಿಕಸಿತ ಭಾರತ – ಗ್ಯಾರಂಟಿ ಫಾರ್ ರೋಜ್ಗಾರ್ ಅಂಡ್ ಆಜೀವಿಕ ಮಿಷನ್ (ಗ್ರಾಮೀಣ) [VB-G-RAM-G] ಅಡಿಯಲ್ಲಿ ಪ್ರಸಕ್ತ ಸಾಲಿನಲ್ಲಿ 2027-28ನೇ ಸಾಲಿನ ಕಾರ್ಮಿಕ ಆಯವ್ಯಯವನ್ನು (Labour Budget) ಮತ್ತು ಗ್ರಾಮ ಪಂಚಾಯತಿ ಅಭಿವೃದ್ಧಿ ಯೋಜನೆ (Gram Panchayat Development Plan -GPDP) ಯೊಂದಿಗೆ ಸಮನ್ವಯಗೊಳಿಸಿ ಸಿದ್ಧಪಡಿಸಬೇಕಾಗಿರುತ್ತದೆ. ಈ ಯೋಜನೆಯಡಿ ಅನುಷ್ಠಾನ ಇಲಾಖೆಗಳ ಒಗ್ಗೂಡಿಸುವಿಕÉ (Convergence) ಮೂಲಕ ಸ್ಯಾಚುರೇಶನ್ ಆಧಾರಿತವಾಗಿ ಗ್ರಾಮೀಣ ಮೂಲಸೌಕರ್ಯಗಳನ್ನು ಸೃಜಿಸುವುದು ಕಡ್ಡಾಯವಾಗಿರುತ್ತದೆ ಎಂದರು. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಅನುಷ್ಠಾನಗೊಳಿಸುವ ಕಾಮಗಾರಿಗಳು ಸೇರಿದಂತೆ ಒಗ್ಗೂಡಿಸುವಿಕೆ ಕಾಮಗಾರಿಗಳನ್ನು 'ಯುಕ್ತಧಾರ' (Yuktdhara) ತಂತ್ರಾಂಶದ ಮೂಲಕ ಗುರುತಿಸಿ, ಸ್ಥಳ ಪರಿಶೀಲನೆ (Ground Truth) ನಡೆಸಿ, ತಂತ್ರಾಂಶದಲ್ಲಿ ಇಂಧೀಕರಿಸಬೇಕಿದೆ. ಈ ಸಂಬಂಧ ಈಗಾಗಲೇ ಅನುಷ್ಠಾನ ಹಂತದ ಅಧಿಕಾರಿಗಳಿಗೆ ಅಗತ್ಯ ತರಬೇತಿ ನೀಡಲಾಗಿದೆ. ತರಬೇತಿಯಲ್ಲಿ ಸೂಚಿಸಿದ ನಿರ್ದೇಶನಗಳಂತೆ ಕ್ರಮ ಕೈಗೊಳ್ಳುವುದು ಕಡ್ಡಾಯವಾಗಿದೆ ಎಂದರು.



ವ್ಯಾಪಕ ಪ್ರಚಾರ ಮತ್ತು ಜನಜಾಗೃತಿ: "ಮಹಾತ್ಮಗಾಂಧಿ ಸುಧಾರಣೋತ್ಸವ" ಅಭಿಯಾನದಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಮಾಡಲು ಜಾಗೃತಿ ಜಾಥಾಗಳು, ಸ್ವಸಹಾಯ ಸಂಘಗಳ (SHG) ಸಭೆಗಳು ಮತ್ತು ಸ್ವಚ್ಛತಾ ವಾಹಿನಿಗಳ ಮೂಲಕ ಧ್ವನಿವರ್ಧಕ ಶ್ರಾವ್ಯ ಸಂದೇಶಗಳ ಪ್ರಸಾರವನ್ನು ಕೈಗೊಳ್ಳಲು ತಿಳಿಸಲಾಗಿದೆ.

ಗ್ರಾಮಸಭೆಗಳ ಆಯೋಜನೆ ಮತ್ತು ಅನುಮೋದನೆ: ಅಕ್ಟೋಬರ್ 02, 2026 ರಿಂದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ "ಮಹಾತ್ಮಗ್ರಾಂಧಿ ಸುಧಾರಣೋತ್ಸವ ಗ್ರಾಮಸಭೆಗಳನ್ನು ಕಡ್ಡಾಯವಾಗಿ ಆಯೋಜಿಸಬೇಕಿದೆ. ಈ ಸಭೆಗಳಲ್ಲಿ ವಿಬಿಜಿರಾಮ್‌ಜಿ (VB-G-RAM-G) ಯೋಜನೆಯಡಿ ಅನುಮತಿಸಲಾದ ಕಾಮಗಾರಿಗಳನ್ನು ಆದ್ಯತೆಯ ಮೇರೆಗೆ ಗುರುತಿಸಿ ನಿಯಮಾನುಸಾರ ಗ್ರಾಮಸಭೆಯ ಅನುಮೋದನೆ ಪಡೆಯುವಂತೆ ಆದೇಶದಂತೆ ಎಲ್ಲ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಮತ್ತು ಅನುಷ್ಠಾನ ಇಲಾಖೆಯವರಿಗೆ ಮಾಹಿತಿ ನೀಡಲಾಗಿದೆ ಎಂದು ತಿಳಿಸಿದರು.

ಜಿಪಂ ಎಡಿಪಿಸಿ ಕಿರಣಕುಮಾರ ಎಸ್.ಎಚ್. ಅವರು ವಿಕಸಿತ ಗ್ರಾಮ ಪಂಚಾಯಿತಿ ಪ್ಲಾನ್ (ಗಿಉಕಕ) ಕುರಿತು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಸಹಾಯಕ ನಿರ್ದೇಶಕರಾದ ಕುಮಾರ ಪೂಜಾರ, ಶಿವಕುಮಾರ ವಾಲಿ, ಗ್ರಾಪಂ ಅಭಿವೃದ್ಧಿ ಅಧಿಕಾರಿಗಳು, ವಿಬಿಜಿ ರಾಮ್‌ಜಿ ಸಿಬ್ಬಂದಿ, ಗ್ರಾಪಂ ಗಣಕಯಂತ್ರ ನಿರ್ವಾಹಕರು ಇತರರು ಇದ್ದರು.

# ಕೇಂದ್ರ ಚುನಾವಣಾ ಆಯೋಗದ ಆಯುಕ್ತ ಜ್ಞಾನೇಶ್ ಕುಮಾರ್ ರಾಜೀನಾಮೆಗೆ ಆಗ್ರಹಿಸಿ ಕಾಂಗ್ರೆಸ್ ಸಮಿತಿಯಿಂದ 3ರಂದು ಪ್ರತಿಭಟನೆ

**ಗದಗ:** ಎಸ್.ಐ.ಆರ್.(ವೋಟ್ ಚೋರಿ) ಬಹಿರಂಗದ ಹಿನ್ನೆಲೆಯಲ್ಲಿ ಕೇಂದ್ರ ಚುನಾವಣಾ ಆಯೋಗದ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ 03-10-2026ರ ಶನಿವಾರದಂದು ಬೆಳಿಗ್ಗೆ 10ಕ್ಕೆ ನಗರದ ಮಹಾತ್ಮ ಗಾಂಧಿ ವೃತ್ತದಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ.

ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ವಾಸಣ್ಣ ಕುರಡಗಿ ನೇತೃತ್ವದಲ್ಲಿ ಮಾಜಿ ಸಚಿವರು, ಶಾಸಕರಾದ ಎಚ್.ಕೆ.ಪಾಟೀಲ, ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ಮಾಜಿ ಶಾಸಕರಾದ ಬಿ.ಆರ್. ಯಾವಗಲ್, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಪಕ್ಷದ ಮುಖಂಡರಾದ ಆನಂದಸ್ವಾಮಿ ಗಡ್ಡದೇವರಮಠ, ಸುಜಾತಾ ದೊಡ್ಡಮನಿ ಪಾಲ್ಗೊಳ್ಳುವರು.

ಕಾರಣ ಈ ಕಾರ್ಯಕ್ರಮಕ್ಕೆ ಯಾವತ್ತು ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರುಗಳು, ಪಕ್ಷದ ಜಿಲ್ಲಾ ಪದಾಧಿಕಾರಿಗಳು ಬ್ಲಾಕ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿಲ್ಲಾ ಪಂಚಾಯತ್, ತಾಲೂಕ ಪಂಚಾಯತ, ಗ್ರಾಮ ಪಂಚಾಯತ, ಎಪಿಎಂಸಿ ಪಕ್ಷದ ಅಧ್ಯಕ್ಷರುಗಳು ಹಾಗೂ ಸದಸ್ಯರುಗಳು ಹಾಗೂ ನಗರಸಭೆ ಪಟ್ಟಣ ಪಂಚಾಯ್ತಿ ಪುರಸಭೆ ಅಧ್ಯಕ್ಷರುಗಳು ಹಾಗೂ ಸದಸ್ಯರುಗಳು, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರ ವಿಭಾಗ, ಕಾರ್ಮಿಕರ ವಿಭಾಗ, ಐ.ಎನ್.ಟಿ.ಯು.ಸಿ, ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೇತ್ ಮಜದೂರ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವಿಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲಿಗಲ್ ರೀಫಾರ್ಮ್ಸ್ ವಿಭಾಗ, ಐ.ಟಿ, ಮತ್ತು ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗ, ಅಧ್ಯಕ್ಷರುಗಳು ಹಾಗೂ ಸದಸ್ಯರುಗಳು, ಪಕ್ಷದ ಅಭಿಮಾನಿಗಳು ಪಾಲ್ಗೊಳ್ಳಬೇಕೆಂದು ಗದಗ-ಬೆಟಗೇರಿ ಶಹರ ಕಾಂಗ್ರೆಸ ಸಮಿತಿಯ ಅಧ್ಯಕ್ಷರಾದ ಬಿ.ಬಿ. ಅಸೂಟಿ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾದ ಕೃಷ್ಣಗೌಡ ಎಚ್. ಪಾಟೀಲ ಹಾಗೂ ಗದಗ ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷರಾದ ಅಶೋಕ ಮಂದಾಲಿಯವರು ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

# ಚದುರಂಗ, ಯೋಗಾಸನ ಸ್ಪರ್ಧೆ: ಮಹಾನ್ ಕಿಡ್ಸ್ ಶಾಲೆಯ ಮಕ್ಕಳು ರಾಜ್ಯಮಟ್ಟಕ್ಕೆ ಆಯ್ಕೆ

**ಗಂಗಾವತಿ:** ವಯೋಮಿತಿಯ ಚದುರಂಗ ಹಾಗೂ ದಸರಾ ಯೋಗಾಸನ ಸ್ಪರ್ಧೆಗಳಲ್ಲಿ ಮಹಾನ್ ಕಿಡ್ಸ್ ಶಾಲೆಯ ವಿದ್ಯಾರ್ಥಿಗಳು ಉತ್ತಮ ಸಾಧನೆ ತೋರಿ ರಾಜ್ಯಮಟ್ಟದ ಸ್ಪರ್ಧೆಗಳಿಗೆ ಆಯ್ಕೆಯಾಗಿದ್ದಾರೆ.

14 ವರ್ಷದೊಳಗಿನ ವಯೋಮಿತಿಯಲ್ಲಿ ನಡೆದ ಚದುರಂಗ ಸ್ಪರ್ಧೆಯಲ್ಲಿ ಸಮೀಕ್ಷಾ ಗುರುವಿನಮಠ, ಶಿವರಾಜ ಪಲ್ಲೇದ ಹಾಗೂ ಲಕ್ಷ್ಮೀನರಸಿಂಹ ಅವರು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಇದೇ ವಯೋಮಿತಿಯಲ್ಲಿ ನಡೆದ ದಸರಾ ಯೋಗಾಸನ ಸ್ಪರ್ಧೆಯಲ್ಲಿ ಸ್ವರೂಪ ಯು.ಎಲ್. ಚಿತ್ರಗಾರ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಪ್ರತಿ ವರ್ಷದಂತೆ ಈ ವರ್ಷವೂ ನಮ್ಮ ಶಾಲೆಯ ವಿದ್ಯಾರ್ಥಿಗಳು ಕ್ವಿಜ್, ಚೆಸ್ ಹಾಗೂ ಯೋಗಾಸನ ಸ್ಪರ್ಧೆಗಳಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿರುವುದು ಸಂತಸ ತಂದಿದೆ. ಶಿಕ್ಷಣದ ಜೊತೆಗೆ ಪಠ್ಯೇತರ ಚಟುವಟಿಕೆಗಳಿಗೆ ಮಹಾನ್ ಕಿಡ್ಸ್ ಶಾಲೆಯಲ್ಲಿ ವಿಶೇಷ ಪ್ರೋತ್ಸಾಹ ಹಾಗೂ ಸಹಕಾರ ನೀಡಲಾಗುತ್ತಿದೆ ಎಂದು ಶಾಲೆಯ ಅಧ್ಯಕ್ಷರಾದ ನೇತ್ರಾಜ್ ಗುರುವಿನಮಠ ತಿಳಿಸಿದರು.

ಶಾಲೆಯ ಮುಖ್ಯೋಪಾಧ್ಯಾಯರಾದ ಶ್ರೀಮತಿ ಸವಿತಾ ಗುರುವಿನಮಠ ಮಾತನಾಡಿ, ಶಿಕ್ಷಣದ ಜೊತೆಗೆ ಚಟುವಟಿಕೆ ಆಧಾರಿತ ಕಲಿಕೆಗೆ ಒತ್ತು ನೀಡಲಾಗುತ್ತಿದೆ. ಪಠ್ಯೇತರ ಚಟುವಟಿಕೆಗಳಲ್ಲಿ ಪಾಲಕರ ಸಹಕಾರದೊಂದಿಗೆ ನಮ್ಮ ವಿದ್ಯಾರ್ಥಿಗಳು ರಾಜ್ಯಮಟ್ಟಕ್ಕೆ ಆಯ್ಕೆಯಾಗಿರುವುದು ಸಂತಸ ತಂದಿದೆ ಎಂದು ಹರ್ಷ ವ್ಯಕ್ತಪಡಿಸಿದರು.




# ಯುವಕ-ಯುವತಿಯರಿಗಾಗಿ "ಯುವ ಪಂಚ್-2026 ಇಂದಿನಿಂದ

ಗದಗ: ಅಕ್ಟೋಬರ್ 02 ಮತ್ತು 03, 2026 ಗದಗ ನಗರದ ವಿಜಯ ಲಲಿತ ಕಲಾ ಸಂಸ್ಥೆ (ಸಾಯಿಬಾಬಾ ದೇವಸ್ಥಾನದ ಹಿಂದೆ, ಹಾತಲಗೇರಿ ನಾಕಾ) ಯಲ್ಲಿ ಗದಗ ಜಿಲ್ಲಾ ಪಂಚಮಸಾಲಿ ಯುವ ಘಟಕದ ವತಿಯಿಂದ 18-38 ವರ್ಷದ ಯುವಕ-ಯುವತಿಯರಿಗಾಗಿ "ಯುವ ಪಂಚ್-2026: ಯುವಶಕ್ತಿ ನಿರ್ಮಾಣ ಕಾರ್ಯಕ್ರಮ"(ವ್ಯಕ್ತಿತ್ವ ವಿಕಸನ ಶಿಬಿರ) ನಡೆಯಲಿದೆ.



ಉದ್ಘಾಟನಾ ಸಮಾರಂಭದಲ್ಲಿ ಮಾಜಿ ಸಚಿವರು ಹಾಗು ಹಿರಿಯ ಶಾಸಕರಾದ ಶ್ರೀ ಸಿ.ಸಿ. ಪಾಟೀಲ್, ಮಾಜಿ ಸಚಿವರಾದ ಶ್ರೀ ಮುರುಗೇಶ್ ನಿರಾಣಿ, ರಾಜ್ಯಾಧ್ಯಕ್ಷರಾದ ಶ್ರೀ ಶಂಕರ ಬಿಸರಳ್ಳಿ, ಡಾ. ಬಸವರಾಜ ದಿಂಡೂರ, ಶ್ರೀ ಕೊಟ್ರೇಶ ಕಿಚಡಿ, ಶ್ರೀ ಈರಣ್ಣ ಕರಿಬಿಷ್ಠಿ, ಶ್ರೀ ಎಫ್. ವಿ. ಮರಿಗೌಡರ, ಶ್ರೀ ಮಂಜುನಾಥ ಮುಧೋಳ, ಶ್ರೀಮತಿ ವಸಂತ ಹುಲ್ಲತಿ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದಾರೆ.

ಈ ಕಾರ್ಯಾಗಾರದ ಸಂಚಾಲಕರಾಗಿ ಶ್ರೀ ಬಸವರಾಜ ಗುಡದೂರ ಮತ್ತು ಸಹ ಸಂಚಾಲಕರಾಗಿ ಶ್ರೀ ಧರ್ಮರಾಜ ಕೊಂಚಿಗೇರಿ ಕಾರ್ಯನಿರ್ವಹಿಸಲಿದ್ದಾರೆ. ಹಾಗೂ ಜಿಲ್ಲೆಯ ಎಲ್ಲಾ ತಾಲೂಕು ಘಟಕಗಳ ಅಧ್ಯಕ್ಷರು, ತಾಲೂಕು ಯುವ ಘಟಕಗಳ ಅಧ್ಯಕ್ಷರು ಮತ್ತು 100ಕ್ಕೂ ಹೆಚ್ಚು ಶಿಬಿರಾರ್ಥಿಗಳು ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

ಈ ಕಾರ್ಯಕ್ರಮದಲ್ಲಿ ಉದ್ಯೋಗ, ಶಿಕ್ಷಣ, ಕೌಶಲ್ಯಾಭಿವೃದ್ಧಿ, ನಾಯಕತ್ವ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ನುರಿತ ಐಎಎಸ್, ಐಪಿಎಸ್ ಮತ್ತು ಕೆಎಎಸ್ ಅಧಿಕಾರಿಗಳಿಂದ ಹಾಗೂ ವಿವಿಧ ಕ್ಷೇತ್ರದ ಅನುಭವಿ-ಸಂಪನ್ಮೂಲ ವ್ಯಕ್ತಿಗಳಿಂದ ವಿಶೇಷ ತರಬೇತಿ ನೀಡಲಾಗುವುದು. ಜೊತೆಗೆ ಯೋಗ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ ಎಂದು ಗದಗ ಜಿಲ್ಲಾ ಪಂಚಮಸಾಲಿ ಯುವ ಘಟಕದ ಅಧ್ಯಕ್ಷ ಸಂತೋಷ ಅಕ್ಕಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ: 9164927009, 7899820634 ಸಂಪರ್ಕಿಸಲು ಕೋರಿದೆ.

SAMALOCHANE RANEBENNURSUDDI KANNADA DAILY MORNING, OWNER, PUBLISHER BY: RAJESHWARI S OLEKAR, PUBLISHED FROM: H.NO, 58 MAIN ROAD, YAKALASAPUR, SUB DISTRICT RANEBENNUR, HAVERI, KARNATAKA-581115, PRINTED AT: VEDAMURTHY S T, GAYATHRI PUBLICATIONS, H.NO, 720, NEKAR COLONY, INDUSTRIAL AREA, HAVERI, KARNATAKA- 581115, EDITOR BY: RAJESHWARI S OLEKAR